# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 69 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 14–09–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 69 | Title- Code: KARKAN 28269 | Chitradurga | Date: 14-09-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪ್ರಚೋದನಕಾರಿ ಭಾಷಣಗಳನ್ನು ಮಾಡಿದರೆ, ಕಠಿಣ ಕ್ರಮ: ಡಿವೈಎಸ್ಪಿ ಚೈತ್ರಾ 2

ತಾಂತ್ರಿಕ ಅಧಿಕಾರಿಗಳಿಗೆ 3 ದಿನಗಳ ಮಲೇರಿಯಾ ಮೈಕ್ರೋಸ್ಕೋಪಿ ತರಬೇತಿಗೆ ಚಾಲನೆ 3

ಜಿಲ್ಲೆಯಲ್ಲಿ ಪಿಓಪಿ ಗಣೇಶ ವಿಗ್ರಹಗಳಿಗೆ ನಿಷೇಧ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಗೌರಸಮುದ್ರ ಜಾತ್ರೆ: ಪ್ರಾಣಿಬಲಿ ನಿಷೇಧ

» **ಚಿತ್ರದುರ್ಗ**

ಚಳ್ಳಕೆರೆ ತಾಲ್ಲೂಕು ಗೌರಸಮುದ್ರ ಗ್ರಾಮದ ಗೌರಸಮುದ್ರ ಮಾರಮ್ಮ ದೇವಿ ಜಾತ್ರೆಯು ಇದೇ ಸೆಪ್ಟಂಬರ್ 18 ರಿಂದ 20 ರವರೆಗೆ ನಡೆಯಲಿದ್ದು, ಈ ಜಾತ್ರೆಗೆ ಲಕ್ಷಾಂತರ ಜನ ಭಕ್ತಾದಿಗಳು ಆಗಮಿಸಲಿದ್ದಾರೆ. ಜಾತ್ರೆಗೆ ಬರುವ ಭಕ್ತಾದಿಗಳು ಜಾತ್ರೆಯಲ್ಲಿ ಯಾವುದೇ ರೀತಿಯ ಪ್ರಾಣಿಬಲಿ ಮಾಡಬಾರದು ಹಾಗೂ ಅಕ್ರಮ ಮದ್ಯ ಮಾರಾಟ ಮತ್ತು ಜೂಜಾಟ ಆಡಬಾರದೆಂದು ಸಾರ್ವಜನಿಕರಿಗೆ ತಿಳಿಯಪಡಿಸಿದೆ. ಪ್ರಾಣಿಬಲಿ, ಅಕ್ರಮ ಮದ್ಯ ಮಾರಾಟ ಮತ್ತು ಜೂಜಾಟವಾಡಿದ ಪಕ್ಷದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

### ಡಾಕ್ ಅದಾಲತ್


» **ಚಿತ್ರದುರ್ಗ**

ಚಿತ್ರದುರ್ಗ ಅಂಚೆ ವಿಭಾಗೀಯ ಡಾಕ್ ಅದಾಲತನ್ನು ಇದೇ ಸೆಪ್ಟೆಂಬರ್ 29ರಂದು ಸಂಜೆ 4ಗಂಟೆಗೆ ಚಿತ್ರದುರ್ಗ ನಗರದ ಕಾಮನಬಾವಿ ಬಡಾವಣೆ, ಕೋಟೆ ರಸ್ತೆ, ಫಿಲ್ಟರ್ ಹೌಸ್ ಹತ್ತಿರದ ಚಿತ್ರದುರ್ಗ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಸಲಾಗುವುದು. ಸಾರ್ವಜನಿಕರು ಮತ್ತು ಅಂಚೆ ಗ್ರಾಹಕರು ಅಂಚೆ ಸೇವೆಗಳಿಗೆ ಸಂಬಂಧಿಸಿದ ದೂರುಗಳನ್ನು ಮತ್ತು ಸಲಹೆಗಳನ್ನು ಸೆಪ್ಟೆಂಬರ್ 27ರಂದು ಮಧ್ಯಾಹ್ನ 3 ಗಂಟೆ ಅಥವಾ ಅದಕ್ಕಿಂತ ಮುಂಚಿತವಾಗಿ ಅಂಚೆ ಅಧೀಕ್ಷಕರ ಕಚೇರಿ, ಕೋಟೆ ರಸ್ತೆ, ಫಿಲ್ಟರ್ ಹೌಸ್ ಹತ್ತಿರ, ಕಾಮನ ಬಾವಿ ಬಡಾವಣೆ, ಚಿತ್ರದುರ್ಗ–577501 ಇವರಿಗೆ ಮುಂದಿನ ಕ್ರಮಕ್ಕಾಗಿ ತಲುಪುವಂತೆ ಕಳುಹಿಸಬೇಕು

# ಸರ್ಕಾರದ ಗ್ಯಾರೆಂಟಿ ಯೋಜನೆಗಳನ್ನು ನೂರಕ್ಕೆ ನೂರರಷ್ಟು ಜಾರಿಗೊಳಿಸಬೇಕು: ಟಿ.ರಘುಮೂರ್ತಿ

» **ಚಿತ್ರದುರ್ಗ**





ನಮ್ಮ ಸರ್ಕಾರದ ಗ್ಯಾರೆಂಟಿ ಯೋಜನೆಗಳನ್ನುಮನೆಮನೆಗೆತಲುಪಿಸುವ ಮೂಲಕ ಯಾರು ಸಹ ಸೌಲಭ್ಯದಿಂದ ವಂಚಿತರಾಗದಂತೆ ಅಧಿಕಾರಿಗಳು ಗಮನ ಹರಿಸಬೇಕು, ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಶಾಸಕ ಟಿ.ರಘುಮೂರ್ತಿ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ತಾಲೂಕಿನ ಚಿಕ್ಕಗೊಂಡನಹಳ್ಳಿ ಮತ್ತು ಮುದ್ದಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಜರುಗಿದ " ಜನಸ್ಪಂದನ " ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿ ಯೋಜನೆಯಲ್ಲಿ ನಾಲ್ಕು ಯೋಜನೆಗಳು ಜಾರಿಯಾಗಿವೆ. ಗೃಹಲಕ್ಷ್ಮಿ , ಗೃಹ ಜ್ಯೋತಿ , ಶಕ್ತಿ, ಅನ್ನ ಭಾಗ್ಯ ಯೋಜನೆಯ ಲಾಭವನ್ನು ಈಗಾಗಲೇ ಫಲಾನುಭವಿಗಳು ಪಡೆಯುತ್ತಿದ್ದಾರೆ. ಆದರೆ ಗ್ರಾಮೀಣ ಭಾಗದ ಹಳ್ಳಿಗಳಲ್ಲಿ ಗೃಹಜ್ಯೋತಿ ಮತ್ತು ಗೃಹಲಕ್ಷ್ಮಿ ಯೋಜನೆಯ ಮಾಹಿತಿಯನ್ನು ಜನರಿಗೆ ತಲುಪಿಸಿ ಸೌಲಭ್ಯ ವಂಚಿತರನ್ನು ಸರ್ಕಾರದ ಸೌಲಭ್ಯ ತಲುಪಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದು ಸೂಚನೆ ನೀಡಿದರು. ಜನರು ಸಹ ಅಧಿಕಾರಿಗಳಿಂದ ಮಾಹಿತಿ ಪಡೆದು ಗ್ಯಾರೆಂಟಿ ಯೋಜನೆಯ ಲಾಭ ಪಡೆಯಬೇಕು.ಅಧಿಕಾರಿಗಳು ನೂರಕ್ಕೆ ನೂರರಷ್ಟು ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಬೇಕು. ತಾಂತ್ರಿಕ ದೋಷವಿರುವ ಫಲಾನುಭವಿಗಳ ಅರ್ಜಿಯನ್ನು ಸಂಬಂಧಿಸಿದಂತೆ ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ ಸೂಕ್ತ ಪರಿಹಾರ ನೀಡದೇ ಸಬೂಬು ಹೇಳಿ ದಿನ ಕಳೆದರೆ ನಾನು ಸಹಿಸುವುದಿಲ್ಲ ವಾರ್ನಿಂಗ್ ನೀಡಿದರು.

**ಗ್ರಾಮೀಣ ಭಾಗದ ಸರ್ವೆ ನಂಬರ್ ಗಳ ವಸತಿ ಪ್ರದೇಶಗಳನ್ನು ಗ್ರಾಮಠಾಣ ವ್ಯಾಪ್ತಿಗೆ ಒಳಪಡಿಸಿ:** ಹಲವು ವರ್ಷಗಳ ಹಿಂದೆ ಜಮೀನುಗಳಲ್ಲಿ ಹೊಸದಾಗಿ ಊರುಗಳು ನಿರ್ಮಿಸಿಕೊಂಡಿದ್ದಾರೆ. ನನ್ನ ಕ್ಷೇತ್ರದ ಎಲ್ಲಾ ಕಡೆ ಈ ರೀತಿಯಲ್ಲಿ ಹೊಸದಾಗಿ ನಿರ್ಮಿಸಿಕೊಂಡಿರುವ ವಸತಿ ಪ್ರದೇಶಗಳನ್ನು ಗ್ರಾಮಠಾಣ ವ್ಯಾಪ್ತಿ ತರುವ ಕೆಲಸ ಕೂಡಲೇ ಆಗಬೇಕು. ಅದಕ್ಕೆ ಅಗತ್ಯದ ಸಹಕಾರ ನಾನು ನೀಡುತ್ತೇನೆ ತುರ್ತಾಗಿ ಈ ಕೆಲಸ ಆಗಬೇಕು ಎಂದು ತಾ.ಪಂ. ಇಓ ಮತ್ತು ತಹಶೀಲ್ದಾರ್ ಅವರಿಗೆ ತಿಳಿಸಿದರು.

**ನೀರು ಸಂಗ್ರಹಣ ಘಟಕಗಳನ್ನು ಸ್ವಚ್ಛಗೊಳಿಸಿ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಎಲ್ಲಾ ಹಳ್ಳಿಗಳ ಓವರ್ ಹೆಡ್ ಟ್ಯಾಂಕ್, ನೆಲತೊಟ್ಟಿಗಳು, ತೊಟ್ಟಿಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಜನರಿಗೆ ಶುದ್ಧ ನೀರು ಒದಗಿಸುವ ಕೆಲಸ ಮಾಡಬೇಕು. ಜನರ ಉತ್ತಮ ಆರೋಗ್ಯಕ್ಕೆ ಅತ್ಯವಶ್ಯಕವಾಗಿ ನೀರು ಬೇಕು. ನೀರಿನ ಸ್ವಚ್ಛತೆ ಇದ್ದರೆ ಆರೋಗ್ಯ ಉತ್ತಮವಾಗಿರುತ್ತದೆ. ಒಂದು ವೇಳೆ ಸ್ವಚ್ಛತೆ ಇಲ್ಲ ಎಂಬ ದೂರುಗಳು ಕೇಳಿ ಬಂದರೆ ನಾನು ಸುಮ್ಮನಿರಲ್ಲ ಎಂದು ಗುಡುಗಿದರು.

**ಗ್ರಾಮ ಆಡಳಿತಧಿಕಾರಿಗಳು ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರ್ವಹಿಸಿ:** ಎಲ್ಲಾ ಗ್ರಾಮ ಆಡಳಿತಧಿಕಾರಿಗಳು ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪ್ರತಿ ಹಳ್ಳಿಗೆ ತೆರಳಿ ಕೆಲಸ ಮಾಡಬೇಕು. ಜನರನ್ನು ನಗರಗಳಿಗೆ ಕರೆಸಿಕೊಳ್ಳುವ ಸಂಸ್ಕೃತಿ ಬಿಡಬೇಕು. ಜನರಿಗೆ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಅವರವರ ಗ್ರಾಮಗಳಿಗೆ ನಿಗದಿಪಡಿಸಿದ ದಿನಾಂಕಗಳಿಗೆ ಆ ಗ್ರಾಮಕ್ಕೆ ತೆರಳಿ ಕೆಲಸ ಮಾಡಬೇಕು. ಇವರು ಬರದಿದ್ದರೆ ನನ್ನ ಗಮನಕ್ಕೆ ತನ್ನಿ ಎಂದು ಜನರಿಗೆ ಸೂಚಿಸಿದರು.

ಗ್ರಾಮ ಪಂಚಾಯತಿಯಲ್ಲಿ ಪಿಡಿಓ ಗಳು ಈ ಸ್ವತ್ತು ನೀಡಲು ಜನರನ್ನು ಅಲೆದಾಡಿಸುವ ದೂರುಗಳಿವೆ. ಇದನ್ನು ಸರಿಪಡಿಸಿಕೊಂಡು ಕಾಲಮಿತಿಯೊಳಗೆ ಕೆಲಸ ಮುಗಿಸಬೇಕು. ಜನರು ಕೂಲಿನಾಲಿ ಬಿಟ್ಟು ಪಂಚಾಯತಿ ಕಾಯುವಂತೆ ಮಾಡದೇ ಸಮಯಕ್ಕೆ ಸರಿಯಾಗಿ ಕೆಲಸ ಮಾಡಿ ಎಂದರು. ಪಿಂಚಣೆಯಿಂದ ಹೊರಗುಳಿದ ಜನರಿಗೆ ಪಿಂಚಣಿಗೆ ಅರ್ಜಿ ಹಾಕಿಸಬೇಕು. ಎಲ್ಲಾ ಹಳ್ಳಿಗಳಲ್ಲಿ ಸರ್ವೆ ಮಾಡಿಸಿ ಎಲ್ಲಾರಿಗೂ ಪಿಂಚಣಿ ಸೌಲಭ್ಯ ಒದಗಿಸಬೇಕು. ಸ್ಮಶಾನ ಸಮಸ್ಯೆಗಳಲ್ಲಿ ಕೇಲವು ಮುಗಿಯುವ ಹಂತಕ್ಕೆ ಬಂದಿವೆ. ಇನ್ನು ಕೆಲವು ಬಾಕಿ ಇದೆ. ಖಾಲಿ ನಿವೇಶನಗಳಿಗೆ ಸರ್ಕಾರ ಜಮೀನು ಇರುವ ಕಡೆ ಗುರುತಿಸಿ ವ್ಯವಸ್ಥೆ ಮಾಡಲಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ನಾಗವೇಣಿ, ತಾ.ಪಂ.ಇಓ ಹನುಮಂತಪ್ಪ, ಸಿಡಿಪಿಓ ಸುಧಾ,ಮುದ್ದಾಪುರ ಗ್ರಾಮ ಪಂಚಾಯತಿ ಅಧ್ಯಕ್ಷೆ ಮಂಗಳ ಸಿದ್ದೇಶ್, ಉಪಾಧ್ಯಕ್ಷೆ ಸುಧಾರಾಣಿ ನಾಗರಾಜ್ , ಚಿಕ್ಕಗೊಂಡನಹಳ್ಳಿ ಅಧ್ಯಕ್ಷೆ ಮಹಂತಮ್ಮ. ಉಪಾಧ್ಯಕ್ಷ ಗಂಗಾಧರಯ್ಯ ಮತ್ತು ಗ್ರಾಮ ಪಂಚಾಯತಿ ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಗ್ರಾಮಸ್ಥರು ಭಾಗವಹಿಸಿ ಸಮಸ್ಯೆಗಳ ಅರ್ಜಿಗಳನ್ನು ಸಲ್ಲಿಸಿದರು.

### ಆಯುಷ್ಮಾನ್ ಭವಃ ಕಾರ್ಯಕ್ರಮಕ್ಕೆ ಡಿಹೆಚ್ಓ ಡಾ.ಆರ್.ರಂಗನಾಥ್ ಚಾಲನೆ

# 14 ಲಕ್ಷ ಆಯುಷ್ಮಾನ್ ಕಾರ್ಡ್ ವಿತರಣೆ ಗುರಿ

» **ಚಿತ್ರದುರ್ಗ**



ಜಿಲ್ಲೆಯಲ್ಲಿ 14ಲಕ್ಷಕ್ಕೂ ಅಧಿಕ ಆಯುಷ್ಮಾನ್ ಕಾರ್ಡ್‌ಗಳ ರಚನೆ ಹಾಗೂ ವಿತರಣೆ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿ ಸಭಾಂಗಣದಲ್ಲಿ ಬುಧವಾರ ಆಯುಷ್ಮಾನ್ ಭವಃ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಇದುವರೆಗೆ ಶೇ.37.5 ರಷ್ಟು ಆಯುಷ್ಮಾನ್ ಕಾರ್ಡ್ ಪ್ರಗತಿ ಸಾಧಿಸಲಾಗಿದೆ. ಇನ್ನೂ 14 ಲಕ್ಷಕ್ಕೂ ಅಧಿಕ ಆಯುಷ್ಮಾನ್ ಕಾರ್ಡ್‌ಗಳ ರಚನೆ ಹಾಗೂ ವಿತರಣೆ ಗುರಿ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಹೆಚ್ಚು ಒತ್ತು ಕೊಟ್ಟು ಆಯುಷ್ಮಾನ್ ಕಾರ್ಡ್ ರಚನೆ ಹಾಗೂ ವಿತರಣೆಗೆ ಕಟಿಬದ್ಧರಾಗಬೇಕು. ಪ್ರತಿಯೊಬ್ಬರಿಗೂ ಆಯುಷ್ಮಾನ್ ಕಾರ್ಡ್ ಲಭಿಸುವ ರೀತಿಯಲ್ಲಿ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಮನವಿ ಮಾಡಿದರು.

ಆಯುಷ್ಮಾನ್ ಭವಃ "ಅಂತ್ಯೋದಯ" ಕಾರ್ಯಕ್ರಮ ಇದೊಂದು ಕೇಂದ್ರ ಸರ್ಕಾರದ ಕಾರ್ಯಕ್ರಮವಾಗಿದ್ದು, ಇದರ ಮೂಲ ಉದ್ದೇಶ ಪ್ರತಿ ಹಳ್ಳಿಯಲ್ಲಿ ಆರೋಗ್ಯ ಸೇವೆ ನೀಡುವುದಾಗಿದೆ. ಈ ಕಾರ್ಯಕ್ರಮವನ್ನು ಎಲ್ಲಾ ಹಳ್ಳಿ ಹಾಗೂ ಪಟ್ಟಣ ಪ್ರದೇಶದ ವಾರ್ಡ್‌ಗಳಲ್ಲಿ ಆರೋಗ್ಯ ಸೇವೆ ವಿಸ್ತರಣೆಗೊಳಿಸುವುದರ ಮುಖಾಂತರ ಪ್ರತಿಯೊಬ್ಬರಿಗೂ ಆರೋಗ್ಯ ಸೇವೆ ನೀಡುವುದಾಗಿದೆ ಎಂದರು. ಆಯುಷ್ಮಾನ್ ಭವಃ ಕಾರ್ಯಕ್ರಮದಲ್ಲಿ ಒಟ್ಟು ಮೂರು ತೆರನಾದ ಆರೋಗ್ಯ ಸೇವೆಗಳನ್ನು ನೀಡಲಾಗುತ್ತಿದ್ದು, ಮೊದಲನೇಯದಾಗಿ ಆಯುಷ್ಮಾನ್ ಆಪ್ಕೆ ದ್ವಾರ್ 3.0 ಈ ಕಾರ್ಯಕ್ರಮವನ್ನು ಇದೇ ಸೆಪ್ಟೆಂಬರ್ 17 ರಿಂದ ಪ್ರಾರಂಭಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಮುಖ್ಯವಾಗಿ ನಾಗರೀಕರಿಗೆ ಆಯುಷ್ಮಾನ್ ಕಾರ್ಡ್‌ಗಳನ್ನು ವಿತರಿಸಲಾಗುವುದು.

ಪುಟ ↘ 2

## ಪ್ರಮುಖ ಸುದ್ದಿ

# 19ಕ್ಕೆ ಗೌರಸಮುದ್ರ ಮಾರಮ್ಮ ಜಾತ್ರೆ

### ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ: ಕಾಮಗಾರಿಗಳ ಅನುಷ್ಠಾನಕ್ಕೆ ಸಿದ್ಧತೆ

» **ಚಳ್ಳಕೆರೆ**



ಪ್ರತಿವರ್ಷದಂತೆ ಈ ವರ್ಷವೂ ಸೆ.19ರ ಮಂಗಳವಾರ ಜಿಲ್ಲೆಯ ಪ್ರಸಿದ್ಧ ಜಾತ್ರೆಗಳಲ್ಲಿ ಒಂದಾದ ಗೌರಸಮುದ್ರ ಶ್ರೀಮಾರಮ್ಮ ದೇವಿ ಜಾತ್ರೆ ನಡೆಯಲಿದ್ದು, ಜಾತ್ರೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಮತ್ತು ಶಾಸಕ ಎನ್.ವೈ. ಗೋಪಾಲಕೃಷ್ಣ ಮಾರ್ಗದರ್ಶನದಲ್ಲಿ ತಾಲ್ಲೂಕು ಆಡಳಿತ ಕೆಲವೊಂದು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿದ್ಧತೆ ನಡೆಸಿದೆ.

ತಹಶೀಲ್ದಾರ್ ರೇಹಾನ್ ಪಾಷ ದೇವಸ್ಥಾನಕ್ಕೆ ತೆರಳಿ ಅಲ್ಲಿ ದೇವಸ್ಥಾನದ ಅಭಿವೃದ್ಧಿ ಸಮಿತಿ ಸದಸ್ಯರು, ಗ್ರಾಮ ಪಂಚಾಯಿತಿಯೊಂದಿಗೆ ಸಭೆ ನಡೆಸಿ ತುಮಲು ಪ್ರದೇಶಕ್ಕೆ ತೆರಳಿ ಅಲ್ಲಿ ರಸ್ತೆ ರಿಪೇರಿ, ಕುಡಿಯುವ ನೀರು ಪೂರೈಕೆ, ಶೌಚಾಲಯ, ಪಾರ್ಕಿಂಗ್ ವ್ಯವಸ್ಥೆ ಕುರಿತು ಚರ್ಚೆ ನಡೆಸಿದರು. ಜಿಪಂ ಇಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಕಾವ್ಯ ಮಾತನಾಡಿ, ತುಮಲು ಪ್ರದೇಶದ ಸಂಪರ್ಕ ರಸ್ತೆಗಳಲ್ಲಿ ಬಿರುಕು, ಗುಂಡಿ ಬಿದ್ದಿದರೆ ಅವುಗಳನ್ನು ಕೂಡಲೇ ರಿಪೇರಿಗೊಳಿಸಲಾಗುವುದು. ನೂತನ ರಸ್ತೆ ನಿರ್ಮಾಣಕ್ಕೆ ಅಧಿಕಾರಿಗಳಿಂದ ಸೂಚನೆ ಬಂದ ನಂತರ ಪೂರೈಸಲಾಗುವುದು.

ಪುಟ ↘ 3




# ಡಿಸಿಸಿ ಬ್ಯಾಂಕ್‌ಗೆ 1.33 ಕೋಟಿ ರೂ. ಲಾಭ

**2022-2023 ಸಾಲಿನಲ್ಲಿ ಶೂನ್ಯ ಬಡ್ಡಿದರ: 103972 ರೈತರಿಗೆ 795 ಕೋಟಿ -ಅಲ್ಪಾವಧಿ ಕೆಸಿಸಿ ಸಾಲ: 469 ಸದಸ್ಯರುಗಳಿಗೆ 40 ಕೋಟಿ**

» **ದಾವಣಗೆರೆ**

ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ 2022-23ನೇ ಸಾಲಿನಲ್ಲಿ 1.33 ಕೋಟಿ ಲಾಭಗಳಿಸಿದೆ ಎಂದು ಬ್ಯಾಂಕ್‌ನ ಅಧ್ಯಕ್ಷ ಹಾಲೇಶಪ್ಪ ಹೇಳಿದರು. ನಗರದ ಸರಕಾರಿ ನೌಕರರ ಭವನದಲ್ಲಿ ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ 2022-23ನೇ ಸಾಲಿನ ವಾರ್ಷಿಕ ಮಹಾಸಭೆಯಲ್ಲಿ ಬ್ಯಾಂಕ್‌ನ ಆಡಳಿತ ಮಂಡಳಿ ಕಾರ್ಯಕ್ರಮ ಉದ್ಘಾಟಿಸಿದ ನಂತರ ಮಾತನಾಡಿದರು. ಕೇಂದ್ರ ಸರಕಾರ ಎಲ್ಲ ವಿಧಧ ಕೃಷಿ ಸಾಲ ನೀಡುವ ಯೋಜನೆಗಳನ್ನು ಬ್ಯಾಂಕಿನಲ್ಲಿ ಜಾರಿಗೊಳಿಸಿ ಜಿಲ್ಲೆಯ ಸುಮಾರು 1 ಲಕ್ಷಕ್ಕಿಂತಲೂ ಅಧಿಕ ರೈತ ಸದಸ್ಯರುಗಳಿಗೆ ಅಲ್ಪಾವಧಿ ಹಾಗೂ ಮಧ್ಯಮಾವಧಿ ಸಾಲ ನೀಡಲಾಗಿದೆ. ಪ್ರತಿ ಸಂಘಕ್ಕೂ ಹೊಸ ಹಾಗೂ ಹೆಚ್ಚುವರಿ ಕೃಷಿ ಸಾಲ ನೀಡುವುದರೊಂದಿಗೆ ಜಿಲ್ಲೆಯ ಪ್ರತಿ ಸಹಕಾರ ಸಂಘವು ಸರಾಸರಿ ರೂ.3.75 ಕೋಟಿಗೂ ಅಧಿಕ ಕೃಷಿ ಸಾಲ ನೀಡಲಾಗಿದೆ ಎಂದರು. ಪ್ರಸಕ್ತ 2022-2023ನೇ ಸಾಲಿನಲ್ಲಿ ರಾಜ್ಯ ಸರಕಾರ ಸೂಚನೆಯಂತೆ ರೂ.784 ಕೋಟಿಗಳ ಅಲ್ಪಾವಧಿ ಕೆಸಿಸಿ ಸಾಲ ಹಾಗೂ ಮಧ್ಯಮಾವಧಿ ಕೃಷಿ ಸಾಲ ನೀಡುವ ಗುರಿ ಹಾಕಿಕೊಳ್ಳಲಾಗಿದೆ. ಅದರಂತೆ ಇತ್ತೀಚಿನವರೆಗೆ ಒಟ್ಟಾರೆ 34538 ರೈತ ಸದಸ್ಯರಿಗೆ ರೂ.256.99 ಕೋಟಿಗಳ ಕೆಸಿಸಿ ಹಾಗೂ ಮಧ್ಯಮಾವಧಿ ಕೃಷಿ ಸಾಲ ವಿತರಿಸಲಾಗಿದ್ದು, ಈ ಪೈಕಿ ರೂ.20.88 ಕೋಟಿಗಳ ಮೊತ್ತವನ್ನು ಹೊಸ ಸದಸ್ಯರುಗಳಿಗೆ ನೀಡಲಾಗಿದೆ. ಹಾಗೆಯೇ ಕಡಿಮೆ ಸಾಲ ಹೊಂದಿರುವ



ರೈತ ಸದಸ್ಯರುಗಳಿಗೆ ಬೆಳೆ ಸಾಲದ ಮಿತಿಗೆ ಒಳಪಟ್ಟು ಹೆಚ್ಚುವರಿ ಸಾಲವನ್ನು ಸಹಕಾರ ಸಂಘಗಳ ಮೂಲಕ ನೀಡುತ್ತಾ ಬಂದಿದ್ದೇವೆ ಎಂದು ವಿವರಿಸಿದರು.

2021-2022 ನೇ ಸಾಲಿನಲ್ಲಿ ರೂ.111.31 ಕೋಟಿಗಳ ಹೊಸ/ ಹೆಚ್ಚುವರಿ ಕೃಷಿ ಸಾಲವನ್ನು ನೀಡಿದ್ದು, ಹಾಗೆಯೇ ಬ್ಯಾಂಕಿನ ಮೂಲಕ ಕೃಷಿಯೇತರ ಸಾಲ ವಿತರಣೆಯನ್ನು ಹೆಚ್ಚಿಸಿ ಬ್ಯಾಂಕಿನ ಆರ್ಥಿಕ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ಇತ್ತೀಚಿನವರೆಗೆ ಒಟ್ಟಾರೆ ರೂ.305.49 ಕೋಟಿಗಳ ಕೃಷಿ ಹಾಗೂ ಕೃಷಿಯೇತರ ಸಾಲ ವಿತರಣೆ ಮಾಡಲಾಗಿದೆ. ಇದರಿಂದ ಬ್ಯಾಂಕಿನ ಸಿಬ್ಬಂದಿಗಳ ವೆಚ್ಚ ಮತ್ತು ಇತರೆ ವೆಚ್ಚಗಳ ನಿರ್ವಹಣೆಗೆ ಅನುಕೂಲಕರವಾಗಿದೆ ಎಂದು ಹೇಳಿದರು.

ಸಕ್ಕರೆ ಕಾರ್ಖಾನೆಗಳ ಜತೆ ಸಂಬಂಧ : ಕುಕ್ಕುವಾಡದ ದಾವಣಗೆರೆ ಶುಗರ್, ಶಾಮನೂರು, ದುಗ್ಗಾವತಿ ಶುಗರ್ ಕಾರ್ಖಾನೆಗಳು ಬ್ಯಾಂಕಿನಲ್ಲಿ ವ್ಯವಹರಿಸುತ್ತಿದೆ. ಇದರಿಂದ ಬ್ಯಾಂಕಿಗೆ ಸಾಕಷ್ಟು ಅನುಕೂಲವಾಗಿದೆ ಎಂದು ಅಧ್ಯಕ್ಷ ಹಾಲೇಶಪ್ಪ ಹೇಳಿದರು.

ಏಳು ಹೊಸ ಶಾಖೆ : ಬಾಡ, ದಾವಣಗೆರೆ ಶಾಮನೂರು, ಪಲ್ಲಾಗಟ್ಟೆ, ಬಿಳಿಚೋಡು, ಪಾಂಡೋಮಟ್ಟಿ, ಹೊಳೆಸಿರಿಗೆರೆ, ಕುಂದೂರು ಸ್ಥಳಗಳಲ್ಲಿ ಏಳು ಡಿಸಿಸಿ ಬ್ಯಾಂಕ್‌ನ ಹೊಸ ಶಾಖೆ ಪ್ರಾರಂಭಿಸಲಾಗಿದೆ ಎಂದು ಅಧ್ಯಕ್ಷರು ವಿವರಣೆ ನೀಡಿದರು. ಈ ಸಂದರ್ಭದಲ್ಲಿ ಬ್ಯಾಂಕಿನ ಆಡಳಿತ ಮಂಡಳಿ ಸದಸ್ಯರಾದ ಉಪಾಧ್ಯಕ್ಷ ಬಿ.ಶೇಖರಪ್ಪ, ನಿರ್ದೇಶಕರಾದ ಡಾ.ಜೆ.ಆರ್.ಷಣ್ಮುಖಪ್ಪ, ಜೆ.ಎಸ್. ವೇಣುಗೋಪಾಲರೆಡ್ಡಿಫಿ, ಕೆ.ಎಚ್. ಷಣ್ಮುಖಪ್ಪ, ಜಗದೀಶಪ್ಪ ಬಣಕಾರ್, ಆರ್.ಜಿ.ಶ್ರೀನಿವಾಸಮೂತು, ಅಪೆಕ್ಸ್ ಬ್ಯಾಂಕ್ ಪ್ರತಿನಿಧಿ ಎಚ್.ಕೆ.ಪಾಲಾಕ್ಷಪ್ಪ, ವೃತ್ತಿಪರ ನಿರ್ದೇಶಕ ಜಿ.ಮುರುಗೇಂದ್ರಪ್ಪ, ಎಚ್.ದಿವಾಕರ್, ಸಹಕಾರ ಸಂಘಗಳ ಉಪನಿಬಂಧಕಿ ಎಚ್.ಅನ್ನಪೂರ್ಣ, ಮುಖ್ಯಕಾರ್ಯನಿರ್ವಹಣಾಧಿಕಾರಿ ಕೆ.ಎನ್.ನಂಜುಂಡೇಗೌಡ, ಮ್ಯಾನೇಜರ್ ತ್ಯಾವರ್‌ನಾಯ್ಕ್ ಸೇರಿದಂತೆ ಇತರರು ಇದ್ದರು.

## ಚರ್ಚೆಯಾದ ವಿಷಯಗಳು

- **44 ಲಕ್ಷ ಹಣ ಷೇರುದಾರರ ಬ್ಯಾಲೆನ್ಸ್‌ನಲ್ಲಿ ಇದ್ದು ಅದನ್ನು ಕಟ್ಟಡ ನಿಧಿಗೆ ಜಮಾ ಮಾಡಿ ಖರ್ಚು ತೋರಿಸಬೇಕಿತ್ತು. ಆದರೆ ಸಿಲ್ಕ್ (ಶುಲ್ಕ) ಉಳಿದಿದೆ ಎಂದು ತೋರಿಸಿದ್ದೀರಿ ಇದು ಹೇಗೆ ಎಂದು ಸದಸ್ಯ ಸಿರಿಗೆರೆ ರಾಜಣ್ಣ ಕೇಳಿದರು.**
- **ಮೊದಲಿಗೆ ಕಟ್ಟಡ ನಿಧಿಗೆ ಶೇ.2ರಷ್ಟು ಹಣ ಕಡಿತಮಾಡಿಕೊಂಡಿದ್ದುಫಿ, ಆ ಹಣ ಎಲ್ಲಿದೆ, ಇಷ್ಟೂ ದಿನವಾದರೂ ಯಾಕೆ ನಿರ್ಮಾಣಗೊಂಡಿಲ್ಲ. ಡಿವಿಡೆಂಟ್ ಕೊಡದೇ ಕಟ್ಟಡ ನಿಧಿಗೆ ಹಣ ಕಡಿತ ಮಾಡಿಕೊಂಡಿಕೊಂಡಿದ್ದು ಸರಿಯಿಲ್ಲ ಎಂದು ಸದಸ್ಯ ಚಂದ್ರಶೇಖರಯ್ಯ ಪ್ರಶ್ನಿಸಿದರು.**
- **ಹೊಸದಾಗಿ 48 ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದ್ದು, ಅವರಿನ್ನು ಪ್ರೊಬೇಷನರಿಯಲ್ಲಿ ಇದ್ದಾರೆ. ಈಗಲೇ ಅವರಿಗೆ 10 ರಿಂದ 12 ಲಕ್ಷ ಸಾಲ ಹೇಗೆ ನೀಡಿದ್ದೀರಿ. ಅದೇ ರೈತರು ಕೇವಲ 1 ಲಕ್ಷ ಸಾಲಕ್ಕೆ ಸಾಕಷ್ಟು ಬಾರಿ ಓಡಾಡಬೇಕಿದೆ. ಈ ಸಿಬ್ಬಂದಿಗಳಿಗೆ ಪ್ರೊಬೇಷನರಿ ಪೀರಿಯಡ್‌ನಲ್ಲಿ ಕೊಡಲು ಅವಕಾಶವಿಲ್ಲ ಹೇಗೆ ನೀಡಿದ್ದೀರಿ, ಬ್ಯಾಂಕ್‌ನ ಸಿಬ್ಬಂದಿಗಳನ್ನು ಯಾವ ಆಧಾರದ ಮೇಲೆ ನೇರ ನೇಮಕಾತಿ ಮಾಡಿಕೊಂಡಿದ್ದೀರಿ ಎಂದು ಸದಸ್ಯ ಮುದೇಗೌಡ್ರು ಗಿರೀಶ್ ಪ್ರಶ್ನಿಸಿದರು.**

- **2022-2023 ಸಾಲಿನಲ್ಲಿ ಶೂನ್ಯ ಬಡ್ಡಿದರ : 103972 ರೈತರಿಗೆ 795 ಕೋಟಿ ಅಲ್ಪಾವಧಿ ಕೆಸಿಸಿ ಸಾಲ**
- **469 ಸದಸ್ಯರುಗಳಿಗೆ 40 ಕೋಟಿ ಮಧ್ಯಮಾವಧಿ ಕೃಷಿ ಸಾಲ ಗುರಿ**
- **ಒಟ್ಟು 24 ಶಾಖೆ, 9 ಶಾಖೆ ಪ್ರಾರಂಭಕ್ಕೆ ನಬಾರ್ಡ್‌ಗೆ ಪ್ರಸ್ತಾವನೆ, ಆರ್‌ಬಿಐ ಅನುಮತಿ ಕಡ್ಡಾಯ**
- **ಕೇಂದ್ರ ಕಚೇರಿ ಕಟ್ಟಡಕ್ಕಾಗಿ ಶಿರಮಗೊಂಡನಹಳ್ಳಿ 20 ಗುಂಟೆ ಜಮೀನು, ಆಡಳಿತಾತ್ಮಕ, ತಾಂತ್ರಿಕ ಅನುಮತಿಗೆ ಪ್ರಸ್ತಾವನೆ**

## ಫಾಸ್ಟ್ ನ್ಯೂಸ್

### 14 ಲಕ್ಷ ಆಯುಷ್ಮಾನ್ ಕಾರ್ಡ್ ವಿತರಣೆ ಗುರಿ

» **ಮೊದಲ ಪುಟದಿಂದ**

ಎರಡನೇಯದಾಗಿ ಆಯುಷ್ಮಾನ್ ಮೇಳ-ಇದೊಂದು ಆರೋಗ್ಯ ಮೇಳವಾಗಿದ್ದು, ಇಲ್ಲಿ ಜನಸಾಮಾನ್ಯರಿಗೆ ರೋಗ ಪರೀಕ್ಷೆ, ಪ್ರಯೋಗಾಲಯ ಪರೀಕ್ಷೆ ಹಾಗೂ ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳ ಮಾಹಿತಿ ನೀಡುವ ಕಾರ್ಯಕ್ರಮವಾಗಿದೆ. ಆಯುಷ್ಮಾನ್ ಮೇಳ ಕಾರ್ಯಕ್ರಮದಲ್ಲಿ ನಾಲ್ಕು ವಾರಗಳಲ್ಲಿ ನಾಲ್ಕು ತೆರನಾದ ಸೇವೆಗಳು ನೀಡುವುದಾಗಿದೆ. ಮೊದಲನೇ ವಾರ ಎನ್.ಸಿ.ಡಿ ಸೇವೆಗಳು, ಮಾಹಿತಿ, ಎರಡನೇ ವಾರ ಸಾಂಕ್ರಾಮಿಕ ರೋಗಗಳ ಸೇವೆಗಳ ಮಾಹಿತಿ, 3ನೇ ವಾರ ತಾಯಿ-ಮಕ್ಕಳ ಸೇವೆ ಕುರಿತು ಮಾಹಿತಿ, ನಾಲ್ಕನೇ ವಾರ ರಾಜ್ಯ, ಜಿಲ್ಲೆಯಲ್ಲಿ ಇರುವಂತಹ ನಿಗದಿತ ರೋಗಗಳ ಸೇವೆಗಳ ಮಾಹಿತಿ ನೀಡಲಾಗುವುದು ಎಂದರು. ಮೂರನೇದಾಗಿ ಆಯುಷ್ಮಾನ್ ಸಭೆ ಕಾರ್ಯಕ್ರಮವು ಅಕ್ಟೋಬರ್ 2ರಂದು ಪ್ರಾರಂಭವಾಗಲಿದ್ದು, ಇಲ್ಲಿ ಗ್ರಾಮ, ವಾರ್ಡ್‌ಗಳಲ್ಲಿ ಸಭೆ ನಡೆಸಿ, ಆಯುಷ್ಮಾನ್ ಕಾರ್ಡ್, ಆರೋಗ್ಯ ಸೇವೆಗಳು, ವಿವಿಧ ರೋಗಗಳ ತಪಾಸಣೆ, ಚಿಕಿತ್ಸೆ ಬಗ್ಗೆ ಮಾಹಿತಿ ನೀಡಲಾಗುತ್ತದೆ.ಈ ಎಲ್ಲಾ ಕಾರ್ಯಕ್ರಮಗಳು ಸೆಪ್ಟೆಂಬರ್ 17 ರಿಂದ ಪ್ರಾರಂಭವಾಗಿ ಡಿಸೆಂಬರ್ ಅಂತ್ಯದವರೆಗೆ ನಡೆಸಲಾಗುವುದು ಎಂದು ಹೇಳಿದರು.ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಚಂದ್ರಶೇಖರ್ ಕಂಬಾಳಿಮಠ್, ರೋಗ ಶಾಸ್ತ್ರಜ್ಞ ಡಾ.ರುದ್ರೇಶ್, ಎನ್‌ಸಿಡಿ ಜಿಲ್ಲಾ ಸಂಯೋಜಕಿ ಡಾ.ಶ್ವೇತಾ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಸೇರಿದಂತೆ ಜಿಲ್ಲಾ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು.

ಆರೋಗ್ಯ ತಪಾಸಣೆ: ಚಿತ್ರದುರ್ಗ ತಾಲ್ಲೂಕಿನ ಮದಕರಿಪುರ ಆರೋಗ್ಯ ಕ್ಷೇಮ ಉಪಕೇಂದ್ರದಲ್ಲಿ ಎನ್‌ಸಿಡಿ (ಸಾಂಕ್ರಾಮಿಕವಲ್ಲದ ರೋಗಗಳು) ಆರೋಗ್ಯ ತಪಾಸಣೆಯಲ್ಲಿ ಮಧುಮೇಹ ಮತ್ತು ರಕ್ತದೊತ್ತಡ ಪರೀಕ್ಷೆಗಳನ್ನು ಕೈಗೊಂಡು ಜೀವನಶೈಲಿ ಮತ್ತು ಆಹಾರಶೈಲಿ ಬದಲಾವಣೆಯ ಆರೋಗ್ಯ ಶಿಕ್ಷಣ ಜಾಗೃತಿ ಕಾರ್ಯಕ್ರಮ ನಡೆಸಲಾಯಿತು. ಈ ಸಂದರ್ಭದಲ್ಲಿ ಮದಕರಿಪುರ ಪಿಡಿಒ ನಾಗರಾಜ್, ಸಮುದಾಯ ಆರೋಗ್ಯ ಅಧಿಕಾರಿ ರಶ್ಮಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ಮನುಜ, ಪವಿತ್ರ, ಆರೋಗ್ಯ ನಿರೀಕ್ಷಣಾಧಿಕಾರಿ ಜ್ಯೋತಿ, ಆಶಾ ಕಾರ್ಯಕರ್ತೆಯರು ಇದ್ದರು.

### ಸೆ.14ರಂದು ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಬಾಲಕ ಬಾಲಕಿಯರ ಕ್ರೀಡಾಕೂಟ

» **ಚಿತ್ರದುರ್ಗ**

ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ, ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವತಿಯಿಂದ ಚಿತ್ರದುರ್ಗ ತಾಲ್ಲೂಕು ಮಟ್ಟದ 14 ಮತ್ತು 17 ವರ್ಷದ ವಯೋಮಿತಿಯ ಹಿರಿಯ ಪ್ರಾಥಮಿಕ ಹಾಗೂ ಫ್ರೌಡಶಾಲಾ ಬಾಲಕ ಬಾಲಕಿಯರ ಕ್ರೀಡಾಕೂಟ ಉದ್ಘಾಟನಾ ಸಮಾರಂಭ ಇದೇ ಸೆಪ್ಟೆಂಬ್ 14ರಂದು ಬೆಳಿಗ್ಗೆ 10.30 ಗಂಟೆಗೆ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು.ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಡಾ. ಎಂ. ಚಂದ್ರಪ್ಪ, ರಘುಮೂರ್ತಿ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ. ನಾರಾಯಣಸ್ವಾಮಿ, ಚಿದಾನಂದ.ಎಂ.ಗೌಡ, ಕೆ.ಎಸ್. ನವೀನ್, ಶಾಲಾ ಶಿಕ್ಷಣ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿ, ಡಯಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕ ಎಂ.ನಾಸೀರ್ ಉದ್ದೀನ್, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ. ಪರಶುರಾಮಪ್ಪ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಸೆ.15ರಂದು ಪ್ರಜಾಪ್ರಭುತ್ವ ದಿನಾಚರಣೆ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಇದೇ ಸೆಪ್ಟೆಂಬರ್ 15ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ತ.ರಾ.ಸು ರಂಗಮಂದಿರದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವರು. ಚಿತ್ರದುರ್ಗ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ. ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ. ನಾರಾಯಣಸ್ವಾಮಿ, ಚಿದಾನಂದ ಎಂ ಗೌಡ, ಕೆ.ಎಸ್. ನವೀನ್ ಸೇರಿದಂತೆ ಜಿಲ್ಲೆಯ ಎಲ್ಲಾ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗ, ಕನ್ನಡ ಪರ, ಪ್ರಗತಿಪರ, ಸಂಘಟನೆಗಳು ಹಾಗೂ ಎಲ್ಲಾ ಸಾರ್ವಜನಿಕರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಶ್ರಾವಣ ಮಾಸದ ಹಿನ್ನೆಲೆ: ಶ್ರೀಚಳ್ಳಕೆರೆಯಮ್ಮ, ಉಡಸಲಮ್ಮ ದೇವಿಯ ಭವ್ಯ ಮೆರವಣಿಗೆ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ಕಡೆಯ ಮಂಗಳವಾರ ಗ್ರಾಮದ ಜನರಿಗೆ ಸುಖ, ಶಾಂತಿ, ನೆಮ್ಮದಿ, ಮಳೆಬೆಳೆ ನೀಡುವಂತೆ ಪ್ರಾರ್ಥಿಸಿ ಗ್ರಾಮ ದೇವತೆಗಳಾದ ಶ್ರೀಚಳ್ಳಕೆರೆಯಮ್ಮ, ಉಡಸಲಮ್ಮ ದೇವಿಯ ಭವ್ಯ ಮೆರವಣಿಗೆಯನ್ನು ನಗರದ ಪ್ರಮುಖ ರಸ್ತೆಗಳಲ್ಲಿ ನಡೆಸಲಾಯಿತು. ಪ್ರಾರಂಭದಲ್ಲಿ ಚಳ್ಳಕೆರೆಯಮ್ಮ ದೇವಿಯ ಉತ್ಸವ ಮೂರ್ತಿಯನ್ನು ಮಂಗಳ ವಾದ್ಯಗಳೊಂದಿಗೆ ಉಡಸಲಮ್ಮ ದೇವಿಯ ದೇವಸ್ಥಾನಕ್ಕೆ ಕರೆತಂದು ಅಲ್ಲಿ ಪೂಜೆ ಸಲ್ಲಿಸಿ




ಎರಡೂ ಮಹಾಮೂರ್ತಿಗಳನ್ನು ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಮೂಲಕ ಕರೆದ್ಯೊಯ್ಯಲಾಗುವುದು. ದಾರಿಯುದ್ದಕ್ಕೂ ಮಹಿಳೆಯರು ರಸ್ತೆಗೆ ನೀರು ಹಾಕಿ ದೇವರಿಗೆ ನಮಸ್ಕರಿಸಿ ಹೂ, ಹಣ್ಣು, ಕಾಯಿ ನೈವೈದ್ಯ ಮಾಡಿಸಿ ಪ್ರಸಾದವನ್ನು ಸ್ವೀಕರಿಸುವರು. ಸುಮಾರು ಎರಡು ಗಂಟೆಗಳಿಗೂ ಹೆಚ್ಚು ಕಾಲ ಚಳ್ಳಕೆರೆ ನಗರದ ಹಳೇಟೌನ್, ಮದಕರಿ ನಗರ, ಪಾವಗಡ ರಸ್ತೆ, ಬೆಂಗಳೂರು ರಸ್ತೆಗಳಲ್ಲಿ ದೇವಿಯ ಉತ್ಸವ ಮೂರ್ತಿಗಳು ಮೆರವಣಿಗೆಯ ಮೂಲಕ ಸಾಗುವವು. ಈ ಸಂದರ್ಭದಲ್ಲಿ ರಸ್ತೆಯ ಎರಡೂ ಬದಿಯಲ್ಲಿನೂರಾರು ಜನರು ದೇವರಿಗೆ ನಮಸ್ಕರಿಸಿದರು. ನಗರಸಭಾ ಸದಸ್ಯ ಸಿ.ಶ್ರೀನಿವಾಸ್, ಎನ್.ಮಂಜುನಾಥ್, ಎಚ್.ವಿಶ್ವನಾಥ, ಎನ್. ರಾಘವೇಂದ್ರ, ಜೆ.ಮಂಜುನಾಥ, ರಘುಕುಮಾರ್, ಶಿವಾನಂದ, ಗುರುಮೂರ್ತಿ, ಸಿದ್ದೇಶ್, ರಾಘವೇಂದ್ರ, ಮಧು, ಲೋಕೇಶ್, ವೀರೇಶ್, ಪೂಜಾರಿ ರುದ್ರೇಶ್ ಮುಂತಾದವರು ಭಾಗವಹಿಸಿದ್ದರು.

## ರಸ್ತೆ ದಾಟುತ್ತಿದ್ದ ವೃದ್ದೆಗೆ ಡಿಕ್ಕಿ ಹೊಡೆದ ಕಾರು: ಸ್ಥಳದಲ್ಲೇ ವೃದ್ಧೆ ಮರಣ

» **ಚಳ್ಳಕೆರೆ**

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಗೊಲ್ಲರಹಟ್ಟಿ ಶ್ರೀಕಂಠಪ್ಪನವರ ಮನೆಯ ಬಳಿ ರಸ್ತೆಬದಿ ನಡೆದುಕೊಂಡು ಹೋಗುತ್ತಿದ್ದ ಕೆಂಚಮ್ಮ(52) ಎಂಬುವವರ ಮೇಲೆ ಕಾರೊಂದು ಹರಿದ ಪರಿಣಾಮವಾಗಿ ಗಾಯಗೊಂಡ ಕೆಂಚಮ್ಮ ಸ್ಥಳದಲ್ಲೇ ಮೃತಪಟ್ಟಿರುತ್ತಾರೆ.

ಮೃತ ಕೆಂಚಮ್ಮ ಬೆಂಗಳೂರಿನಿಂದ ಸಾಣಿಕೆರೆ ಮೂಲಕ ಗೋಪನಹಳ್ಳಿ ಕ್ರಾಸ್‌ನಲ್ಲಿ ಇಳಿದು ತಮ್ಮ ಗ್ರಾಮಕ್ಕೆ ತೆರಳಲು ರಸ್ತೆಬದಿ ನಡೆದುಕೊಂಡು ಹೋಗುವಾಗ ಚಳ್ಳಕೆರೆ ಕಡೆಯಿಂದ ಬಂದ ಕಾರು ಕೆಂಚಮ್ಮಳಿಗೆ ಡಿಕ್ಕಿ ಹೊಡೆದಿದ್ದು ಆಕೆ ಸ್ಥಳದಲ್ಲೇ ಮೃತಪಟ್ಟಿರುತ್ತಾಳೆ. ಅಪಘಾತವೆಸಗಿದ ಕಾರು ಚಾಲಕ ನಾಪತ್ತೆಯಾಗಿದ್ದು ಪಿಎಸ್‌ಐ ಜೆ.ಶಿವರಾಜು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

ಗ್ಯಾಸ್ ರಿಫೀಲಿಂಗ್ ಓರ್ವ ವ್ಯಕ್ತಿ ಪೊಲೀಸ್ ವಶ :- ವಾಲ್ಮೀಕಿ ನಗರದ ಕುವೆಂಪು ಸ್ಕೂಲ್ ಹಿಂಭಾಗದ ವಾಸದ ಮನೆಯಲ್ಲಿ ಕುಮಾರ್ ಎಂಬ ವ್ಯಕ್ತಿ ಗೃಹ ಉಪಯೋಗಿ ಗ್ಯಾಸ್ ಸಿಲೆಂಡರ್‌ನಿಂದ ಗ್ಯಾಸ್ ರಿಫೀಲಿಂಗ್ ಮಾಡುತ್ತಿದ್ದು ಈ ಬಗ್ಗೆ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.


ಆಹಾರ ನಿರೀಕ್ಷಕ ಪಿ.ಶ್ರೀನಿವಾಸ್ ಈ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದು, ಪಿಎಸ್‌ಐ ಕೆ.ಸತೀಶ್‌ನಾಯ್ಕ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

# ಪ್ರಚೋದನಕಾರಿ ಭಾಷಣಗಳನ್ನು ಮಾಡಿದರೆ, ಕಠಿಣ ಕ್ರಮ: ಡಿವೈಎಸ್ಪಿ ಚೈತ್ರಾ

» **ಹೊಸದುರ್ಗ**

ಹಬ್ಬದ ಸಂದರ್ಭದಲ್ಲಿ ಯಾರಾದರೂ, ಮತ್ತೊಬ್ಬರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಬರುವಂತಹ ಪ್ರಚೋದನಕಾರಿ ಭಾಷಣ ಮಾಡಿದರೆ, ಅಂಥವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಡಿವೈಎಸ್ಪಿ ಚೈತ್ರಾ ಸೂಚನೆ ನೀಡಿದರು.

ಗೌರಿ-ಗಣೇಶ ಹಾಗೂ ಈದ್ ಮಿಲಾದ್ ಹಬ್ಬದಲ್ಲಿ ಶಾಂತಿ ಪರಿಪಾಲನೆ ಮಾಡುವ ಕುರಿತು ಗಣಪತಿ ಮೂರ್ತಿ ಪ್ರತಿಷ್ಠಾಪಕರು, ಮುಸ್ಲಿಂ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕುರಿತು ಹೊಸದುರ್ಗ ಪೊಲೀಸ್ ಇಲಾಖೆ ವತಿಯಿಂದ ಬುಧವಾರ ಪಟ್ಟಣದ ಅಶೋಕ ರಂಗ ಮಂದಿರದಲ್ಲಿ ಬುಧವಾರ ಶಾಂತಿ ಸಭೆ ನಡೆಯಿತು. ಈ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಹಬ್ಬದ ಸಂಭ್ರಮದಲ್ಲಿ ಎಲ್ಲರೂ ಶಾಂತಿ ಪರಿಪಾಲನೆ ಮಾಡುವುದು ಮುಖ್ಯ. ಹಬ್ಬದಲ್ಲಿ ಡಿಜೆ ಬಳಸುವ ಬಗ್ಗೆ ಸುಪ್ರೀಂಕೋರ್ಟ್ ನೀಡಿರುವ ಆದೇಶವನ್ನು ಎಲ್ಲರೂ ಪರಿಪಾಲನೆ ಮಾಡಬೇಕು. ರಾತ್ರಿ 10ಗಂಟೆಯಿಂದ ಬೆಳಿಗ್ಗೆ 6ರ ವರೆಗೂ ಯಾರು ಧ್ವನಿವರ್ಧಕ ಬಳಸಬಾರದು. ಡಿಜೆ ಬಳಕೆಗೆ ನಾವೇನಾದರೂ ಅವಕಾಶ ಕೊಟ್ಟಿದ್ದನ್ನು ದುರುಪಯೋಗ ಪಡಿಸಿಕೊಳ್ಳದೇ ಶಾಂತಿ ಪಾಲನೆಗೆ ಇಲಾಖೆಯೊಂದಿಗೆ ಸಹಕರಿಸಬೇಕು. ಬಟಿಂಗ್ಸ್, ಬ್ಯಾನರ್ ಬಳಸುವಾಗ ಪುರಸಭೆ ನಿಯಮ ಪಾಲಿಸಬೇಕು. ಸಂಚಾರ ವ್ಯವಸ್ಥೆಗೆ ತೊಂದರೆ ಆಗದಂತೆ ಹಬ್ಬ ಆಚರಣೆ ಮಾಡಬೇಕು. ಯಾರು ಪ್ರಚೋದನಕಾರಿ ಭಾಷಣ ಮಾಡದಂತೆ ಎಚ್ಚರ ವಹಿಸಬೇಕು ಎಂದು ಸೂಚಿಸಿದರು. ಸಿಪಿಐ ಎನ್.ತಿಮ್ಮಣ್ಣ ಮಾತನಾಡಿ, ಹೊಸದುರ್ಗದಲ್ಲಿಹಿಂದಿನಿಂದಲೂ ಎಲ್ಲಾ ಹಬ್ಬಗಳಲ್ಲಿಯೂ ಶಾಂತಿ ಪರಿಪಾಲನೆ ಮಾಡಿರುವಂತೆ ಈ ಬಾರಿಯೂ ಮಾಡಬೇಕು. ನಮ್ಮ ಇಲಾಖೆಯ ಕಾರ್ಯಕ್ಕೆ ಸಹಕರಿಸಬೇಕು. ಕಾರ್ಯಕ್ರಮಕ್ಕೆ ಯಾವುದಾದರೂ ಗಣ್ಯರನ್ನು ಕರೆಸುವುದಿದ್ದರೆ, ಎಷ್ಟು ಜನರು ಸೇರುತ್ತಾರೆ ಎಂಬ ಬಗ್ಗೆ ಮುಂಚಿತವಾಗಿಯೇ ಮಾಹಿತಿ ನೀಡಬೇಕು.

**ಪ್ರಮುಖ ಸುದ್ದಿ**

# ಆಯುಷ್ಮಾನ್ ಭವ ಪಾಕ್ಷಿಕ ಅಭಿಯಾನಕ್ಕೆ ರಾಷ್ಟ್ರಪತಿ ಚಾಲನೆ

» **ದಾವಣಗೆರೆ**

ಭಾರತದಾದ್ಯಂತ ಆರೋಗ್ಯ ರಕ್ಷಣೆ ನೀಡುವ ಮತ್ತು ಒಳಗೊಳ್ಳುವಿಕೆಯನ್ನು ಮರುವ್ಯಾಖ್ಯಾನಿಸುವ ಕಾರ್ಯಕ್ರಮವಾದ ಆಯುಷ್ಮಾನ್ ಭವ ಪಾಕ್ಷಿಕ ಅಭಿಯಾನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬುಧವಾರ ಚಾಲನೆ ನೀಡಿದರು.

ಸೆ. 13 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾದ ವರ್ಚುವಲ್ ಮೂಲಕ ಕಾರ್ಯಕ್ರಮವನ್ನು ವೀಕ್ಷಣೆ ಮಾಡಲಾಯಿತು. ಮಾನ್ಯ ರಾಷ್ಟ್ರಪತಿಯವರು ಕಾರ್ಯಕ್ರಮ ಉದ್ದೇಶಿಸಿ ಅವರು ಮಾತಾನಾಡಿ ಯುನಿವರ್ಸಲ್ ಹೆಲ್ತ್ ಕವರೇಜ್ ಸಾಧಿಸುವ ಮತ್ತು ಎಲ್ಲರಿಗೂ ಆರೋಗ್ಯ ರಕ್ಷಣೆಯನ್ನು ಖಾತ್ರಿಪಡಿಸುವತ್ತ ಆಯುಷ್ಮಾನ್ ಭವ ಆರೋಗ್ಯ ಯೋಜನೆ ಹೆಜ್ಜೆಯನ್ನಿಟ್ಟಿದೆ. ಸೆಪ್ಟೆಂಬರ್ 17 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮ ದಿನದ ಅಂಗವಾಗಿ ಆರಂಭವಾಗುವ 15 ದಿನಗಳ ಕಾರ್ಯಕ್ರಮವು ಅಕ್ಟೋಬರ್ 2 ರಂದು ಮುಕ್ತಾಯವಾಗಲಿದೆ.

ಆಯುಷ್ಮಾನ್ ಭವ ಅಭಿಯಾನವು ಆರೋಗ್ಯ ಇಲಾಖೆ, ಇತರ ಸರ್ಕಾರಿ ಇಲಾಖೆಗಳು ಮತ್ತು ಗ್ರಾಮೀಣ ಮತ್ತು ನಗರ



ಪ್ರದೇಶಗಳಲ್ಲಿನ ಸ್ಥಳೀಯ ಚುನಾಯಿತ ಸಂಸ್ಥೆಗಳ ಸಮನ್ವಯದೊಂದಿಗೆ ಗ್ರಾಮ ಪಂಚಾಯಿತಿಗಳು ಮುನ್ನಡೆಸವಂತಾಗಬೇಕು. ಭೌಗೋಳಿಕ ಅಡೆತಡೆಗಳನ್ನು ಮೀರಿ, ಪ್ರತಿ ಹಳ್ಳಿ ಮತ್ತು ಪಟ್ಟಣಕ್ಕೆ ಸಮಗ್ರ ಆರೋಗ್ಯ ವ್ಯಾಪ್ತಿಯನ್ನು ವಿಸ್ತರಿಸುವುದು ಮತ್ತು ಯಾರೂ ಸಹ ಆರೋಗ್ಯ ರಕ್ಷಣೆಯಲ್ಲಿ ಹಿಂದೆ ಉಳಿಯದಂತೆ ನೋಡಿಕೊಳ್ಳುವುದು ಇದರ ಮುಖ್ಯ ಉದ್ದೇಶವಾಗಿರುತ್ತದೆ. ಪ್ರತಿ ಗ್ರಾಮ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಆಯುಷ್ಮಾನ್ ಕಾರ್ಡ್‌ಗಳನ್ನು ವಿತರಿಸುವಲ್ಲಿ ಎಬಿಎಚ್ ಐಡಿಗಳನ್ನು ರಚಿಸುವಲ್ಲಿ ಮತ್ತು ಪ್ರಮುಖ ಆರೋಗ್ಯ ಯೋಜನೆಗಳಾದ ಸಾಂಕ್ರಾಮಿಕ ರೋಗಗಳು, ಕ್ಷಯ ನಿಯಂತ್ರಣ ಕೋಶ, ಜೊತೆಗೆ ರಕ್ತದಾನ ಮತ್ತು ಅಂಗಾಂಗ ದಾನ ಅಭಿಯಾನಗಳಂತಹ ಪ್ರಮುಖ ಆರೋಗ್ಯ ಯೋಜನೆಗಳು ಮತ್ತು ರೋಗ ಪರಿಸ್ಥಿತಿಗಳ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು.

ಆರೋಗ್ಯ ಶಿಬಿರಗಳನ್ನು ಯಶಸ್ವಿಯಾಗಿಯೋಜಿಸಲು,ಸಂಘಟಿಸಲು ಮತ್ತು ಕಾರ್ಯಗತಗೊಳಿಸಲು ಆರೋಗ್ಯ ಇಲಾಖೆಯ ಜಿಲ್ಲಾ ಮುಖ್ಯಸ್ಥರೊಂದಿಗೆ ಸಮನ್ವಯ ಸಾಧಿಸಲು ಎಲ್ಲಾ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಆಒಇ ಯಿಂದ ನಿರ್ದೇಶನ ನೀಡಬೇಕು. ಜಿಲ್ಲಾ ಆಡಳಿತ (ಆಅ/ಅಇಔ ಗಳು) ತಮ್ಮ ತಮ್ಮ ಜಿಲ್ಲೆಗಳ ಎಲ್ಲಾ ಡೀನ್‌ಗಳು ಮತ್ತು ನಿರ್ದೇಶಕರಿಗೆ ಸಭೆಯನ್ನು ನಡೆಸಲು ಮತ್ತು ಅಊಅಖ ನಲ್ಲಿ ಆಯುಷ್ಮಾನ್ ಮೇಳಗಳನ್ನು ಸರಿಯಾಗಿ ಅನುಷ್ಠಾನಗೊಳಿಸಿರುವುದನ್ನು ಖಾತರಿಪಡಿಸಿಕೊಳ್ಳಬೇಕು ಎಂದರು.

ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 2 ರ ವರೆಗೆ ಅಭಿಯಾನದ ಅಂಗವಾಗಿ ಆರೋಗ್ಯ ಅಭಿಯಾನದ ಬಗ್ಗೆ ಜಾಗೃತಿ, ಸ್ವಚ್ಛತಾ ಅಭಿಯಾನ, ರಕ್ತದಾನ ಶಿಬಿರ, ಅಂಗಾಂಗಗಳ ದಾನವನ್ನು ಮಾಡುವ ಬಗ್ಗೆ ಇದೇ ಸಾಂದರ್ಭದಲ್ಲಿ ಜಾಗೃತಿ ಮೂಡಿಸಲು ಕರೆ ನೀಡಿದರು. ಪಾಲಿಕೆ ಉಪ ಮೇಯರ್ ಯಶೋಧ ಯಗ್ಗಪ್ಪ, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಪಾಲಿಕೆ ಸದಸ್ಯ ಶ್ರೀನಿವಾಸ್, ಡಿಹೆಚ್‌ಓ ಡಾ.ಷಣ್ಮುಖಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಿಕಿ ವಾಸಂತಿ ಉಪ್ಪಾರ್, ಆರ್.ಸಿ.ಹೆಚ್ ಅಧಿಕಾರಿ ಡಾ;ರೇಣುಕಾರಾಧ್ಯ, ಡಿಎಲ್‌ಓ ಮಂಜುನಾಥ ಪಾಟೀಲ್, ಡಿಟಿಓ ಮುರುಳಿಧರ್, ಜಿಲ್ಲಾ ಸರ್ಜನ್ ಡಾ.ರಾಘವನ್, ಡಿಹೆಚ್‌ಇಓ ಸುರೇಶ್ ಬಾರ್ಕಿ ಇದ್ದರು.

## ಫಾಸ್ಟ್ ನ್ಯೂಸ್

### ಸೆ.15ರಂದು ನಗರಸಭೆ ಕೌನ್ಸಿಲ್ ಸಾಮಾನ್ಯ ಸಭೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ಕೌನ್ಸಿಲ್ ಸಾಮಾನ್ಯ ಸಭೆಯನ್ನು ಸೆಪ್ಟೆಂಬರ್ 15ರಂದು ಬೆಳಿಗ್ಗೆ 11.30ಕ್ಕೆ ನಗರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಕೌನ್ಸಿಲ್ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

### ಪಡಿತರ ಆಹಾರ ಧಾನ್ಯ ಹಂಚಿಕೆ

» ದಾವಣಗೆರೆ

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಸೆಪ್ಟೆಂಬರ್ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ 21 ಕೆ.ಜಿ ಅಕ್ಕಿ ಮತ್ತು ರಾಗಿ 14 ಕೆ.ಜಿ ಪ್ರತಿ ಕಾರ್ಡ್‌ಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3 ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2 ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಎಸ್.ಸಿ ಎಸ್.ಟಿ ಪಡಿತರ ಚೀಟಿದಾರರ ಕುಟುಂಬದ ಮಾಹಿತಿಯನ್ನು ನವೀಕರಿಸಲು ತಮ್ಮ ಪಡಿತರ ಚೀಟಿ ಜೆರಾಕ್ಸ್ ಮತ್ತು ಂಎಖಎ ವತಿಯಿಂದ ನೀಡಲಾದ ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯನ್ನು ಸಮೀಪದ ನ್ಯಾಯ ಬೆಲೆ ಅಂಗಡಿಗೆ ನೀಡಲು ದಾವಣಗೆರೆ ತಾಲ್ಲೂಕು ತಹಶೀಲ್ದಾರ್ ಡಾ. ಎಂ.ಬಿ.ಅಶ್ವಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 19ಕ್ಕೆ ಗೌರಸಮುದ್ರ ಮಾರಮ್ಮ ಜಾತ್ರೆ

» ಮೊದಲ ಪಟುದಿಂದ

ಕುಡಿಯುವ ನೀರು ವಿಭಾಗದ ಇಂಜಿನಿಯರ್ ದಯಾನಂದ, ಸಹಾಯಕ ಇಂಜಿನಿಯರ್ ತಿಪ್ಪೇಸ್ವಾಮಿ ಮಾತನಾಡಿ, ಭಕ್ತರಿಗೆ ಕುಡಿಯುವ ನೀರಿನ ತೊಂದರೆಯಾದಂತೆ ಜಾಗ್ರತೆ ವಹಿಸಲಾಗುವುದು. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಕುಡಿಯುವ ನೀರಿನ ಘಟಕಗಳನ್ನು ತುರ್ತು ರಿಪೇರಿ ಮಾಡಿಸಲಾಗುವುದು, ನೂತನವಾಗಿ ಬೋರ್‌ವೆಲ್ ಹಾಕಿಸಿ ಸಮೃದ್ಧ ನೀರು ಕೊಡುವ ಬಗ್ಗೆಯೂ ಚಿಂತನೆ ನಡೆದಿದೆ. ಅಲ್ಲಲ್ಲಿ ಗ್ರಾಮ ಪಂಚಾಯಿತಿ ಹಾಗೂ ನಗರದಿಂದ ಕುಡಿಯುವ ನೀರಿನ ಟ್ಯಾಂಕರ್ ವ್ಯವಸ್ಥೆ ಮತ್ತು ಖಾಸಗಿ ತೋಟಗಳಿಂದ ನೀರಿನ ಸಂಪರ್ಕ ಪಡೆಯುವ ಯೋಜನೆಯನ್ನೂ ರೂಪಿಸಲಾಗಿದೆ ಎಂದರು.

ಕಾನೂನು ಸುವ್ಯವಸ್ಥೆ ಮತ್ತು ಸಂಚಾರ ನಿಯಂತ್ರಣದ ಬಗ್ಗೆ ಮಾಹಿತಿ ನೀಡಿದ ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ, ಜಿಲ್ಲಾ ರಕ್ಷಣಾಧಿಕಾರಿ, ಹೆಚ್ಚುವರಿ ರಕ್ಷಣಾಧಿಕಾರಿ ಮತ್ತು ಉಪವಿಭಾಗದ ಡಿವೈಎಸ್ಪಿಯವರ ಮಾರ್ಗದರ್ಶನದಲ್ಲಿ ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡಿಕೊಡಲಾಗಿದೆ, ದೇವಸ್ಥಾನ ಹೊರಭಾಗದಲ್ಲಿ ಬೆಳೆದಿರುವ ಜಾಲಿ ಗಿಡಗಳನ್ನು ತೆರವು ಗೊಳಿಸಿ ವಾಹನ ನಿಲುಗಡೆಗೆ ಅನುವು ಮಾಡಿಕೊಡುವುದು ಮತ್ತು ಜಿಲ್ಲಾಡಳಿತದ ನಿರ್ದೇಶನದಂತೆ ಪ್ರಾಣಿ ಬಲಿಯನ್ನು ನಿಷೇದಿಸಿದ್ದು, ಭಕ್ತರು ಬರುವ ವಾಹನಗಳನ್ನು ಗ್ರಾಮದಿಂದ ಹೊರ ಭಾಗದಲ್ಲೇ ತಪಾಸಣೆ ನಡೆಸಲಾಗುವುದು. ಜಾತ್ರೆ ಸಂದರ್ಭದಲ್ಲಿ ಪ್ರಾಣಿಗಳನ್ನು ಬಲಿಕೊಡಲು ತಂದಲ್ಲಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ಶಿರಸ್ಥೇದಾರ್ ಸದಾಶಿವಪ್ಪ, ಸದಸ್ಯರಾದ ಶಶಿಕುಮಾರ್, ಮಲ್ಲಯ್ಯ, ತಿಮ್ಮಾರೆಡ್ಡಿ, ಸಂಜಯ್‌ಗೌಡ, ಗುರುಸ್ವಾಮಿ, ಜಯಮ್ಮ, ತುಳಸಿ, ಸುಭಾಷಿಣಿ, ಅರ್ಚಕ ಪಿ.ಆರ್.ನಿಂಗಣ್ಣ, ರುದ್ರಣ್ಣ, ಪಿಡಿಒ ಹನುಮಂತರಾಜು, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಲಿಂಗೇಗೌಡ, ಗ್ರಾಮ ಲೆಕ್ಕಾಧಿಕಾರಿ ನರೇಂದ್ರಬಾಬು ಮುಂತಾದವರು ಉಪಸ್ಥಿತರಿದ್ದರು.

### ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯ ವೇತನಕ್ಕಾಗಿ ಅರ್ಜಿ

» ದಾವಣಗೆರೆ

ಕೇಂದ್ರೀಯ ಸೈನಿಕ ಮಂಡಳಿಯಿಂದ ಆರ್ಥಿಕ ನೆರವು ಶೀರ್ಷಿಕೆಯಡಿ ಹವಾಲ್ದಾರ್ ರ್‍ಯಾಂಕ್‌ವರೆಗಿನ ಮತ್ತು ಪ್ರಧಾನ ಮಂತ್ರಿ ಶಿಷ್ಯವೇತನ ಯೋಜನೆಯಡಿ ಜೆ.ಸಿ.ಓ ರ್‍ಯಾಂಕ್‌ವರಗಿನ ಮಾಜಿ ಸೈನಿಕರ ಮಕ್ಕಳಿಂದ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ www.ksb.gov.in ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಹವಾಲ್ದಾರ್ ರ್‍ಯಾಂಕ್ ಹೊರಗಿನ ಮಾಜಿ ಸೈನಿಕರ ಮಕ್ಕಳು ಒಂದನೇ ತರಗತಿಯಿಂದ ದ್ವಿತೀಯ ಪಿಯುಸಿ ವರೆಗೆ ವ್ಯಾಸಂಗ ಮಾಡುತ್ತಿರುವವರು ಅಕ್ಟೋಬರ್ 31 ರೊಳಗಾಗಿ ಹಾಗೂ ವೃತ್ತಿಪರ ಶಿಕ್ಷಣವಲ್ಲದ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವವರು ನವೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ. ಸಂ. 08182-220925 ಗೆ ಸಂಪರ್ಕಿಸಲು ಶಿವಮೊಗ್ಗದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

---

ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ವೈದ್ಯರೊಂದಿಗೆ ಎಲ್ಲರೂ ಕೈಜೋಡಿಸಿ

# ಕೇಂದ್ರ ಸರ್ಕಾರದ ಆಯುಷ್ಮಾನ್ ಭವ ಯೋಜನೆಗೆ ಶಾಸಕ ಟಿ.ರಘುಮೂರ್ತಿ ಚಾಲನೆ

» ಚಳ್ಳಕೆರೆ





ಕೇಂದ್ರ ಸರ್ಕಾರ ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಆರೋಗ್ಯವಂತನಾಗಿರಬೇಕೆಂಬ ಮಹತ್ವದ ಉದ್ದೇಶದಿಂದ ಆಯುಷ್ಮಾನ್‌ಭವ ಎಂಬ ನೂತನ ಕಾರ್ಯಕ್ರಮವನ್ನು ಜಾರಿಗೊಳಿಸುವ ಮೂಲಕ ಎಲ್ಲರಿಗೂ ಆರೋಗ್ಯ ಎಲ್ಲೆಡೆ ಆರೋಗ್ಯ ಎಂಬ ಘೋಷಣೆಯೊಂದಿಗೆ ಈ ಕಾರ್ಯಕ್ರಮಕ್ಕೆ ರಾಷ್ಟ್ರದ ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ ನೀಡಿದ್ದು, ಈ ಕಾರ್ಯಕ್ರಮದ ಯಶಸ್ಸಿಗೆ ಎಲ್ಲರೂ ಕೈಜೋಡಿಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ತಾಲ್ಲೂಕು ಆರೋಗ್ಯ ಇಲಾಖೆ, ಸಾರ್ವಜನಿಕ ಆಸ್ಪತ್ರೆ ಸಹಯೋಗದೊಂದಿಗೆ ಕೇಂದ್ರ ಸರ್ಕಾರ ಆಯುಷ್ಮಾನ್ ಭವ ವಚಿಯಲ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಅಂಗನವಾಡಿ, ಆಶಾ ಕಾರ್ಯಕರ್ತರೂ ಸೇರಿದಂತೆ ಆಸ್ಪತ್ರೆಯ ವೈದ್ಯರು ಸಿಬ್ಬಂದಿ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸಾಕಷ್ಟು ಪರಿಶ್ರಮ ವಹಿಸಬೇಕು. ಇತ್ತೀಚಿನ ದಿನಗಳಲ್ಲಿ ಕೆಲವೊಂದು ರೋಗಗಳು ಸುಲಭವಾಗಿ ವ್ಯಾಪಿಸಿ ಪ್ರಾಣವನ್ನು ಬಲಿ ಪಡೆಯುತ್ತಿವೆ. ವ್ಯಕ್ತಿ ಆರೋಗ್ಯವಂತನಾಗಿದ್ದರೆ ಮಾತ್ರ ಯಾವುದೇ ರೋಗ ಸುಳಿಯದು. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಆರೋಗ್ಯ ಸದೃಢತೆಗಾಗಿ ಇಲಾಖಾ ನಿಯಮಗಳನ್ನು ಪಾಲಿಸುವಂತ ಹೆಚ್ಚು ಗಮನ ನೀಡಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ, ಒಟ್ಟು ಮೂರು ಹಂತದಲ್ಲಿ ಕೇಂದ್ರ ಸರ್ಕಾರದ ಆಯುಷ್ಮಾನ್ ಕಾರ್ಯಕ್ರಮ ಜಾರಿಯಾಗಲಿದೆ. ಇಂದು ರಾಷ್ಟ್ರಪತಿಯವರು ಔಪಚಾರಿಕವಾಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ. ಸೆ.17ರಂದು ರಾಷ್ಟ್ರದ ಪ್ರಧಾನಮಂತ್ರಿ ನರೇಂದ್ರಮೋದಿ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಒಟ್ಟು ಮೂರು ಹಂತದಕಾರ್ಯಕ್ರಮ ಜಾರಿಯಾಗಬೇಕಿದೆ. ಮೊದಲ ಹಂತದಲ್ಲಿ ಐದು ವರ್ಷ ತುಂಬಿದ ಎಲ್ಲಾ ಮಕ್ಕಳಿಗೂ ಆಯುಷ್ಮಾನ್ ಭವ ಕಾರ್ಡ್ ನೀಡಿ ಅವರಿಗೆ ಚಿಕಿತ್ಸೆ ವ್ಯವಸ್ಥೆ ಮಾಡುವುದು, ಎರಡನೇ ಹಂತದಲ್ಲಿ ಗ್ರಾಮ, ತಾಲ್ಲೂಕು ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಮೇಳ ನಡೆಸುವ ಮೂಲಕ ಜಾಗೃತಿ ಮೂಡಿಸುವುದು. ಮೂರನೇ ಹಂತದಲ್ಲಿ ಎಲ್ಲರ ಸಹಕಾರದಿಂದ ಈ ಕಾರ್ಯಕ್ರಮವನ್ನು ಜನರಿಗೆ ತಲುಪಿಸುವುದು ಎಂದರು.

ಕಾರ್ಯಕ್ರಮದಲ್ಲಿಆಡಳಿತವೈದ್ಯಾಧಿಕಾರಿ ಡಾ.ಜೆ.ಡಿ.ವೆಂಕಟೇಶ್, ಜಯಲಕ್ಷ್ಮಿ, ಸಾಯಿನಾಗಜ್ಯೋತಿ, ನಾಗರಾಜು, ಪಂಕಜ, ಸುಹೀನಾ, ಸಂಜಯ್, ನಗರಸಭಾ ಸದಸ್ಯ ಎಂ.ಜೆ.ರಾಘವೇಂದ್ರ, ಆರೋಗ್ಯ ಇಲಾಖೆಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ತಿಪ್ಪೀರಮ್ಮ, ವಿಕ್ರಮ್, ಮುಖಂಡ ಬಿ.ವಿ.ಸಿರಿಯಣ್ಣ ಮುಂತಾದವರು ಭಾಗವಹಿಸಿದ್ದರು.

---

# ಮಕ್ಕಳ ಫೋಕ್ಸೋ ಕಾಯ್ದೆ ತಿಳಿವಳಿಕೆ ಅಗತ್ಯ

» ಚಿತ್ರದುರ್ಗ




ಪ್ರತಿ ವಿದ್ಯಾರ್ಥಿಯೂ ಬಾಲ್ಯದಲ್ಲಿಯೇ ಮಕ್ಕಳ ಹಕ್ಕುಗಳು ಮತ್ತು ಅವರ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯಗಳ ತಡೆ ಕಾನೂನುಗಳ ಬಗ್ಗೆ ತಿಳಿದುಕೊಳ್ಳುವುದು ಅಗತ್ಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ಚಿತ್ರದುರ್ಗ ತಾಲ್ಲೂಕು ತುರುವನೂರು ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ ಹಾಗೂ ಸರ್ಕಾರಿ ಪದವಿಪೂರ್ವ ಕಾಲೇಜಿನ ಸಹಯೋಗದಲ್ಲಿ ಮಂಗಳವಾರ ನಡೆದ ಕಾನೂನು ಅರಿವು, ನೆರವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ವಿದ್ಯಾರ್ಥಿಗಳು ಗುರಿಯ ಕಡೆಗೆ ತಮ್ಮ ಗಮನ ಕೇಂದ್ರೀಕರಿಸಬೇಕು. ಸಮಯ ವ್ಯರ್ಥಮಾಡದೆ ಓದಿನ ಕಡೆಗ ಆಸಕ್ತಿ ವಹಿಸಬೇಕು. ಅಹಿತಕರ ಘಟನೆಗಳು ಜರುಗಿದರೆ ನ್ಯಾಯ ಕೊಡಿಸಲು ಪೊಲೀಸ್ ಹಾಗೂ ನ್ಯಾಯಾಲಯ ವ್ಯವಸ್ಥೆಗಳಿವೆ. ಆದರೆ ಘಟನೆ ನಡೆಯುವ ಮುನ್ನವೇ ತಾವೇ ಜಾಗ್ರತೆ ವಹಿಸಬೇಕು. ಮಕ್ಕಳ ಹಕ್ಕುಗಳು ಮತ್ತು ಪೋಕ್ಸೊ ಕಾಯ್ದೆಯ ಬಗ್ಗೆ ಅರಿತುಕೊಳ್ಳಬೇಕು' ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ, ಹದಿಹರೆಯದ ವಯಸ್ಸಿನ ಮುಗ್ಧ ಮನಸ್ಸನ್ನು ಹಾಳುಗೆಡಹುವ ವ್ಯಕ್ತಿಗಳಿಂದ ಜಾಗೃತರಾಗಿರಿ ಎಂದು ಸಲಹೆ ನೀಡಿದರು.

ಉಪಪ್ರಧಾನ ಕಾನೂನು ನೆರವು ಅಭಿರಕ್ಷಕ ಎಂ.ಮೂರ್ತಿ ಮಾತನಾಡಿ, ಮನೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಅಹಿತಕರ ಸನ್ನಿವೇಶ ಕಂಡುಬಂದಾಗ ಅದನ್ನು ಪ್ರತಿಭಟಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಪೋಷಕರು ಹಾಗೂ ಶಿಕ್ಷಕರ ಬಳಿ ಮುಕ್ತವಾಗಿ ಚರ್ಚಿಸಬೇಕು ಎಂದು ಸಲಹೆ ನೀಡಿದರು.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಕಾಲೇಜಿನ ಪ್ರಾಚಾರ್ಯ ಕೆ.ತಿಮ್ಮಯ್ಯ ಉಪಪ್ರಾಚಾರ್ಯರಾದ ಕಿರಣ್ಮಯಿ ಆರ್.ಬಂಡಿಗಡಿ, ಉಪನ್ಯಾಸಕರಾದ ತಿಪ್ಪಣ್ಣಗೌಡ, ಸಿ.ಎಲ್.ಏಕನಾಥ, ಬಿ.ನಾಗೇಂದ್ರ ಚೌಧರಿ, ಶಾಲಾಭಿವೃದ್ಧಿ ಸಂಘದ ಮಾರುತಿ ಇದ್ದರು.

---

## ಸಚಿವ ಡಿ.ಸುಧಾಕರರಿಂದ ಸಂವಿಧಾನಕ್ಕೆ ಅವಮಾನ: ಕೂಡಲೇ ರಾಜೀನಾಮೆ ಪಡೆದು ತನಿಖೆ ನಡೆಸಿ

» ಚಳ್ಳಕೆರೆ



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರು ನೂರಾರು ವರ್ಷಗಳಿಂದ ಶೋಷಣೆ ಒಳಗಾಗಿದ್ದ ದಲಿತ ಸಮುದಾಯಕ್ಕೆ ಸಂವಿಧಾನದ ಮೂಲಕ ಶಕ್ತಿಯನ್ನು ನೀಡಿದ್ದು, ದಲಿತರು ದೌರ್ಜನ್ಯ ಮತ್ತು ಶೋಷಣೆಯಿಂದ ಮುಕ್ತರಾಗಿ ಸಾಮಾಜಿಕ ನೆಲೆಗಟ್ಟಿನಲ್ಲಿ ಬದುಕಬೇಕೆಂಬ ಮಹದಾಸೆಯನ್ನು ಹೊಂದಿದ್ದರು. ಆದರೆ, ಸಂವಿಧಾನ ಬದ್ಧವಾಗಿ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಡಿ.ಸುಧಾಕರ್ ದಲಿತರ ಮೇಲೆ ದೌರ್ಜನ್ಯ ಮತ್ತು ವಂಚನೆ ನಡೆಸುವ ಮೂಲಕ ಸಂವಿಧಾನಕ್ಕೆ ಅಪಚಾರವೆಸಗಿದ್ದಾರೆಂದು ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ, ಮಾಜಿ ಪುರಸಭಾ ಸದಸ್ಯ ಎಂ.ಶಿವಮೂರ್ತಿ ಆರೋಪಿಸಿದರು.

ಅವರು, ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಬೆಂಗಳೂರಿನ ಯಲಹಂಕ ವ್ಯಾಪ್ತಿಯಲ್ಲಿ ಕಡುಬಡತನಕ್ಕೆ ಸಿಲುಕಿದ್ದ ಕುಟುಂಬವೊಂದರ ಆಸ್ತಿಯನ್ನು ಮೋಸದಿಂದ ಲಪಟಾಯಿಸಿರುವ ಸಚಿವ ಡಿ.ಸುಧಾಕರ್ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದರೂ ದೂರಿನಲ್ಲಿ ಸಚಿವ ಡಿ.ಸುಧಾಕರ ಎರಡನೇ ಆರೋಪಿಯಾಗಿದ್ದು, ಆ ಬಗ್ಗೆ ಕ್ರಮ ಕೈಗೊಂಡು ಸಂವಿಧಾನವನ್ನು ಗೌರವಿಸಬೇಕಾದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಜಿ.ಪರಮೇಶ್ವರ ಸುಧಾಕರ್ ತಪ್ಪು ಮಾಡಿಲ್ಲ, ಈ ಬಗ್ಗೆ ಮಾಹಿತಿ ಪಡೆಯುತ್ತೇವೆಂದು ಸಮಜಾಯಿಸಿ ಹೇಳುವ ಮೂಲಕ ಇವರೂ ಸಹ ಸುಧಾಕರವರ ಹಾದಿಯಲ್ಲಿ ಸಾಗುತ್ತಿದ್ದಾರೆಂಬು ಅನುಮಾನ ಮೂಡಿದೆ. ಸರ್ಕಾರ ಶೋಷಣೆಗೆ ಒಳಗಾದ ದಲಿತ ಕುಟುಂಬಕ್ಕೆ ರಕ್ಷಣೆ ನೀಡಿ ಅವರಿಗೆ ನ್ಯಾಯ ಒದಗಿಸುವ ಕೆಲಸವನ್ನು ಕೂಡಲೇ ಮಾಡಬೇಕು. ಸಚಿವರ ವಿರುದ್ಧ ನೊಂದ ಕುಟುಂಬ ಮಾಡಿರುವ ಆರೋಪಗಳ ಬಗ್ಗೆ ಸಂಪೂರ್ಣ ತನಿಖೆಯಾಗಬೇಕು. ತನಿಖೆ ಆರಂಭಕ್ಕೂ ಮುನ್ನವೇ ಸಚಿವ ಡಿ.ಸುಧಾಕರರಿಂದ ರಾಜೀನಾಮೆ ಪಡೆಯಬೇಕು. ಸಚಿವ ಡಿ.ಸುಧಾಕರ್ ಈ ಹಿಂದೆ ಶಾಸಕರಾಗಿದ್ದಾಲೇ ಅನೇಕ ದೌರ್ಜನ್ಯ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ. ಆದ್ದರಿಂದ ಸರ್ಕಾರ ನಿಷ್ಪಕ್ಷಪಾತ ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಇಲ್ಲವಾದರೆ ರಾಜ್ಯದಾದ್ಯಂತ ಸುಧಾಕರ್ ರಾಜೀನಾಮೆಗೆ ಒತ್ತಾಯಿಸಿ ದಲಿತ ಹಾಗೂ ಪ್ರಗತಿಪರ ಸಂಘಟನೆಗಳು ಬೀದಿಗಿಳಿದು ಪ್ರತಿಭಟಿಸಲು ಸಜ್ಜಾಗಿವೆ ಎಂದು ತಿಳಿಸಿದ್ದಾರೆ.

---

# ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿಗಳಿಗೆ 3 ದಿನಗಳ ಮಲೇರಿಯಾ ಮೈಕ್ರೋಸ್ಕೋಪಿ ತರಬೇತಿಗೆ ಚಾಲನೆ

» ಚಿತ್ರದುರ್ಗ



ಚಿತ್ರದುರ್ಗ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಬುಧವಾರ ಆಯೋಜಿಸಿದ್ದ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿಗಳಿಗೆ ಮೂರು ದಿನಗಳ ಮಲೇರಿಯಾ ಮೈಕ್ರೋಸ್ಕೋಪಿ ತರಬೇತಿ ಕಾರ್ಯಕ್ರಮಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಆರ್. ರಂಗನಾಥ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಡಿಹೆಚ್‌ಓ ಡಾ.ಆರ್.ರಂಗನಾಥ್, 2025ಕ್ಕೆ ಮಲೇರಿಯಾ ನಿರ್ಮೂಲನಾ ಗುರಿಯನ್ನು ಹೊಂದಿದ್ದು, ಈ ನಿಟ್ಟಿನಲ್ಲಿ ಹೆಚ್ಚು ಮಲೇರಿಯಾ, ಡೆಂಗಿ. ಚಿಕನ್ ಗುನ್ಯ ಇತರೆ ಕೀಟಜನ್ಯ ರೋಗಗಳನ್ನು ಪರೀಕ್ಷೆ ಮಾಡಿ ಮತ್ತು ಸೂಕ್ತ ಚಿಕಿತ್ಸೆಯನ್ನು ನೀಡಿದ್ದಲ್ಲಿ ಮಲೇರಿಯಾ ನಿರ್ಮೂಲನೆ ಮಾಡಬಹುದು ಎಂದು ಹೇಳಿದರು.ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಎನ್.ಕಾಶಿ, ಕೀಟಶಾಸ್ತ್ರಜ್ಞೆ ನಂದಿನಿ ಕಡಿ, ಜಿಲ್ಲಾ ನೋಡಲ್ ವೆಂಕಟೇಶ್, ಪ್ರಯೋಗ ಶಾಲಾ ತಂತ್ರಜ್ಞ ಮಲ್ಲಿಕಾರ್ಜುನ್, ಆರೋಗ್ಯ ಮೇಲ್ವಿಚಾರಕರಾದ ಶಿಲ್ಪ, ವಸಂತ, ಲಕ್ಷ್ಮಿ, ಪ್ರಯೋಶಾಲ ತಾಂತ್ರಿಕ ಅಧಿಕಾರಿಗಳಾದ ಶ್ರೀನಿವಾಸ್, ನಾಗರಾಜ್, ಹೆಚ್.ಎ.ನಾಗರಾಜ್, ಲೋಕೇಶ್, ಪಾಂಡು, ಶ್ವೇತಾ, ಕಾವ್ಯ ಇದ್ದರು.

---

## ಎಸ್.ಟಿ ನಿಗಮ ಕಚೇರಿ ಸ್ಥಳಾಂತರ

**ದಾವಣಗೆರೆ:** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಛೇರಿಯನ್ನು ನಗರದ ಶಾಮನೂರಿನ ಗ್ಲಾಸ್ ಹೌಸ್ ಪಕ್ಕದಲ್ಲಿರುವ ನೂತನ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.9591812109, 9035364337ಗೆ ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಪಿ. ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ನೀರು ರಕ್ಷಣೆ ಮಾಡಿದರೆ ನೀರಿನ ಕೊರತೆ ಇರುವುದಿಲ್ಲ

» ಹೊಸದುರ್ಗ



ಪ್ರತಿಯೊಬ್ಬ ಕೆರೆ ಸಮಿತಿಯ ಸದಸ್ಯರು ಡಾ॥ ಸರ್.ಎಂ.ವಿಶ್ವೇಶ್ವರಯ್ಯ ಅವರಂತೆ ನೀರು ಉಳಿಸುವ ಕಾರ್ಯಕ್ರಮ ಆಲೋಚನೆ ಮಾಡಬೇಕಾಗಿದೆ ಎಂದು ಪ್ರಾದೇಶಿಕ ನಿರ್ದೇಶಕರಾದ ಗೀತಾ.ಬಿ ತಿಳಿಸಿದರು.

ಶ್ರೀ.ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಪಟ್ಟಣದ ರಾಧಕೃಷ್ಣಕಲ್ಯಾಣಮಂಟಪದಆವರಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಕೆರೆ ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳ ಒಂದು ದಿನದ ಕಾರ್ಯಗಾರ ಉದ್ಘಾಟನೆ ಮಾಡಿ ಮಾತಾನಾಡಿದರು.

ಹಿಂದಿನ ಕಾಲದಿಂದಲೂ ನೀರಿನ ಮಹತ್ವದ ಬಗ್ಗೆ ಕಾಳಜಿಯನ್ನು ವಹಿಸುತ್ತ ಸರ್.ಎಂ.ವಿಶ್ವೇಶ್ವರಯ್ಯ ಅವರ ಯೋಚನೆಯಂತೆ ಇಂದಿನ ಪ್ರತಿಯೊಬ್ಬ ಕೆರೆ ಸಮಿತಿಯ ಪದಾಧಿಕಾರಿಗಳು ನೀರನ್ನು ರಕ್ಷಣೆ ಮಾಡುವ ಆಲೋಚನೆ ಮಾಡಿದರೆ ತಮ್ಮ ತಮ್ಮ ಗ್ರಾಮದ ನೀರಿನ ಕೊರತೆ ಇರುವುದಿಲ್ಲ ಎಂದು ತಿಳಿಸಿದರು.

ಡಾ॥ ವಿರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ನಮ್ಮ ಊರು ನಮ್ಮ ಕೆರೆ ಗ್ರಾಮದ ಕೆರೆ ಸಮಿತಿಯನ್ನು ರಚನೆ ಮಾಡಿ ಮಾರ್ಗದರ್ಶನ ನೀಡಿದ್ದಾರೆ,ಪ್ರಾದೇಶಿಕ ವ್ಯಾಪ್ತಿಯಲ್ಲಿ ಇದುವರೆಗೂ 85 ಕೆರೆಗಳ ಹೂಳೆತ್ತುವ ಕಾಮಗಾರಿ ಮಾಡಲಾಗಿದೆ.

ಕರ್ನಾಟಕ ರಾಜ್ಯದಲ್ಲಿ ಒಟ್ಟು 613 ಕೆರೆಗಳನ್ನು ಪೂರ್ಣಗೊಳಿಸಲಾಗಿದೆ. ಕೆರೆಯ ರಕ್ಷಣೆ ಮತ್ತು ಉತ್ತಮವಾಗಿ ನಿರ್ವಹಣೆ ಮಾಡಲು ಶ್ರೀ. ಕ್ಷೇತ್ರಧರ್ಮಸ್ಥಳಗ್ರಾಮಾಭಿವೃದ್ಧಿಯೋಜನೆ ವತಿಯಿಂದ ಕೆರೆ ಸಮಿತಿಗಳ ಒಂದು ದಿನದ ಮಾಹಿತಿ ಕಾರ್ಯಗಾರವನ್ನು ಪಧಾದಿಕಾರಿಗಳು ಕೆರೆ ರಕ್ಷಣೆಯನ್ನು ಕೈ ಜೋಡಿಸಲು ಕರೆ ನೀಡಿದರು.

ಸಂಪನ್ಮೂಲ ವ್ಯಕ್ತಿ ಡಾ॥ ಎನ್.ಜಿ.ದೇವರಾಜ್ ರೆಡ್ಡಿ ಮಾತನಾಡಿ ಪ್ರತಿಯೊಬ್ಬ ವ್ಯಕ್ತಿ ಪ್ರತಿ ಮನೆಯಲ್ಲಿ ಮಳೆ ನೀರಿನ ಕೊಯ್ಲು ಮಾಡಿ ತಮ್ಮ ತಮ್ಮ ಬೋರುಗಳನ್ನು ರಿಚಾರ್ಜ್ ಮಾಡಿಕೊಂಡರೆ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಬರಗಾಲವೇ ಬರುವುದಿಲ್ಲ ಎಂದು ಉದಾಹರಣೆ ಸಹಿತ ಮಾಹಿತಿ ನೀಡಿದರು.

ಈಕಾರ್ಯಕ್ರಮದಲ್ಲಿಯೋಜನಾಧಿಕಾರಿ ಶಿವಣ್ಣ. ಕೆರೆ ಇಂಜಿನಿಯರ್ ಹರೀಶ್ ಹಿರಿಯೂರು ಜಿಲ್ಲಾ ನಿರ್ದೇಶಕರಾದ ವಿನಯ್ ಕುಮಾರ್ ಸುವರ್ಣ ಸೇರಿದಂತೆ ಹಿರಿಯೂರು, ಚಳ್ಳಕೆರೆ, ಹೊಸದುರ್ಗ ತಾಲ್ಲೂಕಿನ ಪದಾಧಿಕಾರಿಗಳು ಕೃಷಿ ಮೇಲ್ವಿಚಾರಕರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಬೃಹತ್ ಉದ್ಯೋಗ ಮೇಳದ ಅವಧಿ ವಿಸ್ತರಣೆ

» ದಾವಣಗೆರೆ

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ.) ಜಿಲ್ಲಾಡಳಿತ ಭವನ, ಶಿವಮೊಗ್ಗ ಇವರ ವತಿಯಿಂದ ಆಯೋಜಿಸಿದ್ದ ಬೃಹತ್ ಉದ್ಯೋಗ ಮೇಳವನ್ನು ಆಡಳಿತಾತ್ಮಕ ಕಾರಣಗಳಿಂದ ಮುಂದೂಡಲಾಗಿದೆ. ಮುಂದಿನ ದಿನಾಂಕವನ್ನು ತಿಳಿಸಲಾಗುವುದೆಂದು ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

### ಕೇಂದ್ರ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳೊಂದಿಗೆ ವಾರ್ತಾಲಾಪ; ಉದ್ಘಾಟನೆ

» ದಾವಣಗೆರೆ

ಕೇಂದ್ರ ವಾರ್ತಾ ಶಾಖೆ ಪಿಐಬಿ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸೆಪ್ಟೆಂಬರ್ 14 ರಂದು ಬೆಳಗ್ಗೆ 11.30 ಕ್ಕೆ ಪಿ.ಬಿ.ರಸ್ತೆಯಲ್ಲಿನ ತ್ರಿಶೂಲ್ ಕಂಫರ್ಟ್ ಹತ್ತಿರವಿರುವ ಹೋಟೆಲ್ ಅಪೂರ್ವದಲ್ಲಿ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಕುರಿತಂತೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ವಾರ್ತಾಲಾಪ ಕಾರ್ಯಗಾರ ಮತ್ತು ಸಂವಾದ ಏರ್ಪಡಿಸಲಾಗಿದೆ. ಸಂಸದರಾದ ಡಾ; ಜಿ.ಎಂ.ಸಿದ್ದೇಶ್ವರ ಉದ್ಘಾಟಿಸುವರು. ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಪಿ.ಐ.ಬಿ ಉಪನಿರ್ದೇಶಕ ಎಸ್.ಪ್ರಕಾಶ್, ಜಿ.ಪಂ.ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ವಾರ್ತಾಧಿಕಾರಿ ಧನಂಜಯ, ವರದಿಗಾರರ ಕೂಟದ ಅಧ್ಯಕ್ಷರಾದ ಕೆ.ಏಕಾಂತಪ್ಪ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷರಾದ ಮಂಜುನಾಥ ಹಾಗೂ ಇನ್ನಿತರರ ಭಾಗವಹಿಸುವರೆಂದು ಪಿ.ಐ.ಬಿ. ಮಾಧ್ಯಮ ಮತ್ತು ಸಂವಹನ ಅಧಿಕಾರಿ ಪಿ.ಜಿ.ಪಾಟೀಲ್ ತಿಳಿಸಿದ್ದಾರೆ.

### ಪ್ರೇಮಕುಮಾರ್ ನಿಧನ

» ಹೊಸದುರ್ಗ



ಪಟ್ಟಣದ ಜೈನ ಸಮಾಜದ ಹಿರಿಯ ಶ್ರಾಮಕ ಅಶೋಕ ಬಸ್ ಮಾಲಿಕರಾದ ಇಜಾರಿ ಎಚ್.ಕೆ. ಪ್ರೇಮ್‌ಕುಮಾರ್(75) ಬುಧವಾರ ಮುಂಜಾನೆ ಪಟ್ಟಣದ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಪತ್ನಿ ಓರ್ವ ಪುತ್ರಿ ಮೂವರು ಪುತ್ರರು ಹಾಗೂ ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ.ಮೃತರಅಂತ್ಯಕ್ರಿಯೆಯುಸೋಮವಾರ ಸಂಜೆ ಪಟ್ಟಣದ ರುದ್ರಭೂಮಿಯಲ್ಲೆ ನಡೆಯಿತು. ಮೃತರಿಗೆ ಮಾಜಿ ಶಾಸಕ ಇಲ್ಕಲ್ ವಿಜಯಕುಮಾರ್, ಧನಪಾಲ್,ಬ್ರಹ್ಮಪಾಲ್ ಸೇರಿದಂತೆ ಸಮಾಜದ ಮುಖಂಡರುಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

### ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರ ಹುದ್ದೆ: ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ ಬಿ.ಐ.ಇ.ಆರ್.ಟಿ ( ಪ್ರಾಥಮಿಕ-ಹಂತ 1 ರಿಂದ 5ನೇ ತರಗತಿ) ಹುದ್ದೆಗಳನ್ನು ತಾತ್ಕಾಲಿಕವಾಗಿ ನೇರಗುತ್ತಿಗೆ ಆಧಾರದ ಮೇಲೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 16 ಅರ್ಜಿ ಸಲ್ಲಿಸಲು ಕೊನೆಯ ದಿನ. ಸಮಗ್ರ ಶಿಕ್ಷಣ ಕರ್ನಾಟಕ ರಾಜ್ಯ ಯೋಜನಾ ನಿರ್ದೇಶಕರು 2023-24ನೇ ಸಾಲಿನಿಂದ ಸಮನ್ವಯ ಶಿಕ್ಷಣ ಮಧ್ಯವರ್ತನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟನಲ್ಲಿಜಿಲ್ಲೆಯಲ್ಲಿ ಖಾಲಿ ಇರುವ ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರುಗಳ (ಪ್ರಾಥಮಿಕ ಹಂತ 1 ರಿಂದ 5ನೇ ತರಗತಿ) ಹುದ್ದೆಗಳನ್ನು ನೇರ ಗುತ್ತಿಗೆಯಡಿಲ್ಲಿ ಭರ್ತಿ ಮಾಡುವ ಕುರಿತು ಆದೇಶಿಸಿರುತ್ತಾರೆ. ಅದರಂತೆ ವಿಶೇಷ ಶಿಕ್ಷಣದಲ್ಲಿ ಆರ್‌ಸಿಐ ನಿಯಮದಂತೆ (ವಿಶೇಷ ಚೇತನ ಮಕ್ಕಳಿಗೆ) ಪ್ರಾಥಮಿಕ ಬಿ.ಐ.ಇ.ಆರ್.ಟಿ ಹುದ್ದೆಗೆ D.Ed in special education from a RCI approved institution and possess a valid RCI CRR nuber OR D.EL. Ed with a recognised Qualification (Certificate/Diploma) from RCI approved institution equivalent to D.ed in special education and possess a valid RCI CRR number ºÁUÀÆ 6 Month Training of teaching in cross disability area in inclusive education ವಿದ್ಯಾರ್ಹತೆಯನ್ನು ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹಅಭ್ಯರ್ಥಿಗಳುಸಂಬಂಧಿಸಿದವಿದ್ಯಾರ್ಹತೆಯ ದಾಖಲೆಗಳ್ಳು ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿಗಳ ಕಚೇರಿ, ಸಮಗ್ರ ಶಿಕ್ಷಣ ಕರ್ನಾಟಕ, ಚಿತ್ರದುರ್ಗ ಇಲ್ಲಿಗೆ ಮುದ್ದಾಂ ಆಗಿ ಇದೇ ಸೆಪ್ಟೆಂಬರ್ 16ರ ಮಧ್ಯಾಹ್ನ1.30ರ ಒಳಗೆ ಅರ್ಜಿಗಳನ್ನು ಸಲ್ಲಿಸಬೇಕು.

# ಜಿಲ್ಲೆಯಲ್ಲಿ ಪಿಒಪಿ ಗಣೇಶ ವಿಗ್ರಹಗಳಿಗೆ ನಿಷೇಧ

## ಜಿಲ್ಲೆಯಾದ್ಯಂತ ತೀವ್ರ ನಿಗಾ: ಅಧಿಕಾರಿಗಳ ತಂಡದಿಂದ 12 ಪಿಒಪಿ ಗಣೇಶ ವಿಗ್ರಹಗಳ ವಶ

» ಚಿತ್ರದುರ್ಗ

ಪ್ರಸಕ್ತ ವರ್ಷದ ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿಪರಿಸರಕ್ಕೆಮಾರಕವಾಗಿರುವ ಪಿಒಪಿ (ಪ್ಲಾಸ್ಟರ್ ಆಫ್ ಪ್ಯಾರಿಸ್) ಗಣೇಶ ಮೂರ್ತಿಗಳ ಮಾರಾಟ ಹಾಗೂ ಬಳಕೆ ಮಾಡದಂತೆ ನಿಷೇಧಿಸಲಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಅಧಿಕಾರಿಗಳ ತಂಡ ವಿವಿಧೆಡೆ ದಾಳಿ ನಡೆಸಿ, ಒಟ್ಟು 12 ಪಿಒಪಿ ಗಣೇಶ ಮೂರ್ತಿಗಳನ್ನು ವಶಕ್ಕೆ ಪಡೆದುಕೊಂಡಿದೆ ಎಂದು ಪರಿಸರ ಅಧಿಕಾರಿ ಪ್ರಕಾಶ್ ಅವರು ತಿಳಿಸಿದ್ದಾರೆ.





ಗಣೇಶ ಚತುರ್ಥಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಬೇಕು, ಮಣ್ಣಿನಿಂದ ಮಾಡಿರುವ ಗಣೇಶ ಮೂರ್ತಿಗಳನ್ನು ಬಳಸಬೇಕು, ಪರಿಸರಕ್ಕೆ ಮಾರಕವಾಗಿರುವ ಹಾಗೂ ರಾಸಾಯನಿಕಯುಕ್ತ ಬಣ್ಣ ಲೇಪಿತ ಗಣೇಶ ಮೂರ್ತಿಗಳನ್ನು ಬಳಸದಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದರು. ಅಲ್ಲದೆ ಜಿಲ್ಲೆಯಲ್ಲಿ ಈ ಕುರಿತು ನಿಗಾ ವಹಿಸಿ, ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳನ್ನು ಒಳಗೊಂಡ ತಂಡವನ್ನು ರಚಿಸಿ, ಪಿಒಪಿ ಗಣೇಶ ಮೂರ್ತಿಗಳ ಬಳಕೆ ಅಥವಾ ಮಾರಾಟ ಕಂಡುಬಂದಲ್ಲಿ, ಅವುಗಳನ್ನು ವಶಕ್ಕೆ ಪಡೆದು, ಕ್ರಮ ವಹಿಸುವಂತೆ ನಿರ್ದೇಶನ ನೀಡಿದ್ದರು. ಈ ಹಿನ್ನೆಲೆಯಲ್ಲಿ ಅಧಿಕಾರಿಗಳ ತಂಡ ಜಿಲ್ಲೆಯ ನಗರ, ಪಟ್ಟಣ ಮತ್ತು ಗ್ರಾಮಗಳಲ್ಲಿಯೂ ತೀವ್ರ ನಿಗಾ ವಹಿಸಿದ್ದು, ಜಿಲ್ಲೆಯ ಅಲ್ಲಲ್ಲಿ ದಾಳಿ ನಡೆಸಿ, ನಿಷೇಧಿತ ಪಿಒಪಿ ಗಣೇಶ ಮೂರ್ತಿಗಳ ಮಾರಾಟ ಮಾಡುತ್ತಿರುವುದನ್ನು ಪತ್ತೆಹಚ್ಚಿ, ಅವುಗಳನ್ನು ವಶಕ್ಕೆ ಪಡೆದುಕೊಂಡಿದೆ.

ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ರೇಣುಕಾ, ಪರಿಸರ ಅಭಿಯಂತರ ಜಾಫರ್, ಪರಿಸರ ಅಧಿಕಾರಿ ಪ್ರಕಾಶ್ ಮುಂತಾದ ಅಧಿಕಾರಿಗಳು, ನಗರದ ವಿವಿಧೆಡೆ ಸಂಚರಿಸಿ, ಮಾರಾಟಕ್ಕೆ ಇರಿಸಿದ್ದ ಹಾಗೂ ಸಾಗಾಣಿಕೆ ಮಾಡಲಾಗುತ್ತಿದ್ದ ಪಿಒಪಿ ಗಣೇಶ ಮೂರ್ತಿಗಳನ್ನು ವಶಕ್ಕೆ ಪಡೆದುಕೊಂಡಿರುತ್ತಾರೆ. ಅದೇ ರೀತಿ ಹೊಸದುರ್ಗ ತಾಲ್ಲೂಕು ಮಾವಿನಕಟ್ಟೆ ಗ್ರಾಮ ವ್ಯಾಪ್ತಿಯಲ್ಲಿಯೂ 04 ಪಿಒಪಿ ಗಣೇಶ ಮೂರ್ತಿಗಳನ್ನು ಅಲ್ಲಿನ ಪಿಡಿಒ ವಶಕ್ಕೆ ಪಡೆದುಕೊಂಡಿರುತ್ತಾರೆ. ಜಿಲ್ಲೆಯಲ್ಲಿ ಬುಧವಾರದಂದು ಒಟ್ಟಾರೆ 12 ಪಿಒಪಿ ಗಣೇಶ ಮೂರ್ತಿಗಳನ್ನು ವಶಕ್ಕೆ ಪಡೆದುಕೊಂಡಿದ್ದು, ಪರಿಸರಕ್ಕೆ ಹಾನಿಯಾಗದಂತೆ, ನಿಯಮಾನುಸಾರ ವಿಲೇವಾರಿ ಮಾಡಲು ಮುಂದಿನ ಕ್ರಮ ಕೈಗೊಳ್ಳಲಾಗಿದೆ. ಜಿಲ್ಲೆಯಲ್ಲಿ ಯಾರೂ ಕೂಡ ಪರಿಸರಕ್ಕೆ ಹಾನಿ ಉಂಟು ಮಾಡುವ ಪಿಒಪಿ ಗಣೇಶ ಮೂರ್ತಿಗಳ ಬಳಕೆ ಮತ್ತು ಮಾರಾಟ ನಿಷೇಧಿಸಲಾಗಿದ್ದು, ಯಾರೂ ಕೂಡ ಗಣೇಶ ಹಬ್ಬಕ್ಕೆ ಪಿಒಪಿ ಗಣೇಶ ವಿಗ್ರಹಗಳನ್ನು ಬಳಸಬಾರದು, ಜೇಡಿ ಮಣ್ಣಿನಿಂದ ಹಾಗೂ ನೈಸರ್ಗಿಕ ಬಣ್ಣದಿಂದ ಮಾಡಿರುವಗಣೇಶಮೂರ್ತಿಯನ್ನುಹಬ್ಬಕ್ಕೆ ಬಳಸಬೇಕು. ಜಿಲ್ಲೆಯಲ್ಲಿ ಯಾರಾದರೂ ಪಿಒಪಿ ಗಣೇಶ ಮೂರ್ತಿಯನ್ನು ಮಾರಾಟ ಮಾಡುತ್ತಿದ್ದಲ್ಲಿ, ಅಂತಹ ವಿಗ್ರಹಗಳನ್ನು ವಶಕ್ಕೆ ಪಡೆದುಕೊಳ್ಳಲಾಗುವುದು ಎಂದು ಪರಿಸರ ಅಧಿಕಾರಿ ಪ್ರಕಾಶ್ ಅವರು ತಿಳಿಸಿದ್ದಾರೆ.

# ಪಿಒಪಿ ಗಣೇಶ ಮೂರ್ತಿ ಮಾರುವಂತಿಲ್ಲ: ನಗರಸಭೆ ಪೌರಾಯುಕ್ತೆ ಎಂ.ರೇಣುಕಾ

» ಚಿತ್ರದುರ್ಗ

ಪರಿಸರಕ್ಕೆ ಹಾನಿಕಾರಕವಾಗಿರುವ ಪಿಒಪಿ ಮತ್ತು ಲೋಹ ಮಿಶ್ರಿತ ಬಣ್ಣದಿಂದ ತಯಾರಿಸಿದ ವಿಗ್ರಹಗಳ ಬಳಕೆಯನ್ನು ಸರ್ಕಾರ ನಿಷೇಧಿಸಲಾಗಿದ್ದು,ಪರಿಸರಕ್ಕೆಹಾನಿಕಾರವಾಗುವ ಇಂತಹ ವಿಗ್ರಹಗಳ ಮಾರಾಟ ಹಾಗೂ ಬಳಕೆಗೆ ಅವಕಾಶವಿಲ್ಲ ಎಂದು ಚಿತ್ರದುರ್ಗ ನಗರಸಭೆ ಪೌರಾಯು ಕ್ತರಾದ ಎಂ.ರೇಣುಕಾ ಹೇಳಿದರು



ಪಿಒಪಿ ಗಣೇಶ ವಿಗ್ರಹಗಳ ಮಾರಾಟ ಹಾಗೂ ಬಳಕೆ ಕುರಿತಂತೆ ಜಿಲ್ಲಾಧಿಕಾರಿಗಳು ವಿವಿಧ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿದ ಬೆನ್ನಲ್ಲೇ ಚಿತ್ರದುರ್ಗ ನಗರಸಭೆಯ ಅಧಿಕಾರಿಗಳ ತಂಡ ಚಿತ್ರದುರ್ಗ ನಗರದ ವಿವಿಧ ಭಾಗಗಳಲ್ಲಿ ಭೇಟಿ ನೀಡಿ ಪರಸರ ಗಣೇಶೋತ್ಸವ ಹಿನ್ನೆಲೆಯಲ್ಲಿ ಮಣ್ಣಿನ ಗಣೇಶ ಮಾಡಿ, ಯಾವುದೇ ಕಾರಣದಿಂದಾಗಿ ಪಿಒಪಿ ಬಳಸಬೇಡಿ ಎಂದು ಜಾಗೃತಿ ಮೂಡಿಸುವ ಕೆಲಸ ಮಾಡಿದರು.ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಎಲ್ಲಾ ಜನರಲ್ಲಿ ಅರಿವು ಮೂಡಿಸುವ ಕಾರ್ಯ ಮಾಡುತ್ತಿದ್ದು ಪಿಒಪಿ ಗಣೇಶ ವಿಗ್ರಹಗಳ ಮಾರಾಟ ಅಥವಾ ಬಳಕೆ ಕಂಡುಬಂದಲ್ಲಿ ಕೂಡಲೆ ಅದನ್ನು ವಶಪಡಿಸಿಕೊಳ್ಳಬೇಕುಎಂದುಪೌರಾಯುಕ್ತರಾದ ಎಂ ರೇಣುಕಾ ಅವರು ಹೇಳಿದರು.

ನಿರ್ದಿಷ್ಟ ಪ್ರದೇಶದಲ್ಲಿ ಸ್ಥಾಪಿಸಲಾಗುವ ಸಾರ್ವಜನಿಕ ಗಣಪತಿಗಳನ್ನು ವಿಲೇವಾರಿ ಮಾಡಲು ನಿರ್ದಿಷ್ಟ ಜಲಮೂಲಗಳನ್ನು ನಿಗದಿಪಡಿಸಲಾಗುತ್ತಿದ್ದು, ಗಣೇಶಮೂರ್ತಿ ವಿಸರ್ಜನೆ ಮಾಡುವ ಸ್ಥಳಗಳ ಕುರಿತು ಸ್ಥಳೀಯವಾಗಿ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ನೀಡುತ್ತೇವೆ, ಪರಿಸರಕ್ಕೆ ಹಾನಿಯುಂಟು ಮಾಡುವ ವಿಗ್ರಹಗಳನ್ನು ಜಲಮೂಲಗಳಲ್ಲಿ ವಿಸರ್ಜನೆಗೆ ಅವಕಾಶ ನೀಡುವುದಿಲ್ಲ ಎಂದರು. ಈ ಸಂದರ್ಭದಲ್ಲಿ ಪರಿಸರ ಅಭಿಯಂತರ ಜಾಫರ್, ರೆವಿನ್ಯೂ ಇನ್ಸ್‌ಪೆಕ್ಟರ್ ಸಿ.ಮೋಕ್ಷದಾಯಿನಿ, ಯೋಗೇಂದ್ರ, ಆರೋಗ್ಯ ನಿರೀಕ್ಷಕರಾದ ಭಾರತಿ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಪ್ರಕಾಶ್, ಉಪ ಪರಿಸರ ಅಧಿಕಾರಿಗಳಾದ ರಾಜೇಶ್, ವನ್ಯಜೀವಿ ಮತ್ತು ಪರಿಸರ ಸಂರಕ್ಷಣಾ ವೇದಿಕೆ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್ ಇದ್ದರು.

## ಸೈಬರ್ ಲಾ ಮತ್ತು ಪೋಕ್ಸೋ ಕಾಯ್ದೆ ಕುರಿತು ಕಾನೂನು ಅರಿವು



» ಚಿತ್ರದುರ್ಗ

ನಮ್ಮ ಎಕ್ಸ್‌ಪರ್ಟ್ಸ್ ಪಿಯು ಕಾಲೇಜಿನಲ್ಲಿ ಬುಧವಾರ ಸೈಬರ್ ಲಾ ಮತ್ತು ಪೋಕ್ಸೋ ಕಾಯ್ದೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ನಡೆಯಿತು. ಹಿರಿಯ ಸಿವಿಲ್ ನ್ಯಾಯಾದೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಕಾರ್ಯಕ್ರಮ ಉದ್ಘಾಟಿಸಿ, ಪೋಕ್ಸೋ ಕಾಯ್ದೆ ಬಗ್ಗೆ ಮಾತನಾಡಿದರು. ಪ್ಯಾನಲ್ ವಕೀಲ ಮೊಹಮ್ಮದ್ ಷಂಶೇರ್ ಅಲಿ ಅವರು ಸೈಬರ್ ಲಾ ಕುರಿತು ಉಪನ್ಯಾಸ ನೀಡಿದರು. ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಗಂಗಾಧರ್, ಕಾಲೇಜಿನ ಪ್ರಾಂಶುಪಾಲ ಶ್ರೀನಿವಾಸ್ ಪದೋರ್ತಿ, ಅಕ್ಯಾಡಮಿಕ್ ಪ್ರಾಂಶುಪಾಲ ವಾಹಿದ್ ಖಾನ್, ಕನ್ನಡ ಉಪನ್ಯಾಸಕಿ ಈ.ಮಮತ, ಇಂಗ್ಲಿಷ್ ಉಪನ್ಯಾಸಕರಾದ ಪದ್ಮ ಆರ್. ಜೈನ್ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.

# ಕರ್ನಾಟಕ ದಲಿತ ಸಂಘರ್ಷ ಸಮಿತಿ(ಪರಿವರ್ತನವಾದ) ಮನವಿ

» ಚಳ್ಳಕೆರೆ

ಜಿಲ್ಲಾ ಪ್ರಧಾನ ಸಂಚಾಲಕ ಕೆ.ಮಂಜುನಾಥ ಹೆಗ್ಗೆರೆ ತಹಶೀಲ್ದಾರ್‌ಗೆ ಮನವಿ ನೀಡಿ, ದಲಿತ ಕುಟುಂಬದ ಮೇಲೆ ದೌರ್ಜನ್ಯವೆಸಗಿದ ಸಚಿವ ಡಿ.ಸುಧಾಕರ್‌ರವರ ವರ್ತನೆಯನ್ನು ದಲಿತ ಸಂಘಟನೆ ಖಂಡಿಸುತ್ತದೆ.

ಸಚಿವರಾಗಿ ಎಲ್ಲಾ ಜಾತಿ ವರ್ಗಗಳ ಮೇಲೆ ಅಪಾರವಾದ ವಿಶ್ವಾಸ, ಗೌರವವಿಟ್ಟು ಕಾರ್ಯನಿರ್ವಹಿಸ ಬೇಕಾದ ಸಚಿವರೇ ದಲಿತ ಕುಟುಂಬದ ಸದಸ್ಯರನ್ನು ಹೀಯಾಳಿಸಿ ಮಾತನಾಡಿ ದೌರ್ಜನ್ಯವೆಸಗಿ, ವಂಚನೆ ಮಾಡಿರುವುದು ಘೋರ ಅಪರಾಧ.



ಈ ಹಿನ್ನೆಲೆಯಲ್ಲಿ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಸಚಿವ ಡಿ.ಸುಧಾಕರ್‌ರವರನ್ನು ಸಚಿವಸ್ಥಾನದಿಂದ ವಜಾಗೊಳಿಸಿ ತನಿಖೆ ನಡೆಸಬೇಕೆಂದು ಆಗ್ರಹಿಸಿದ್ದಾರೆ.

ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಹಾನ್ ಪಾಷ ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಕಳಿಸಿಕೊಡುವ ಭರವಸೆ ನೀಡಿದರು. ಮನವಿ ಅರ್ಪಿಸುವ ಸಂದರ್ಭದಲ್ಲಿ ಕೆ.ಟಿ.ಮುತ್ತುರಾಜ್, ದ್ಯಾವರನಹಳ್ಳಿಸುರೇಶ್, ಟಿ.ಮಂಜುನಾಥ, ಯೋಗೇಶ್, ಕೃಷ್ಣಪ್ಪ, ಮಲ್ಲಿಕಾರ್ಜುನ್, ಗೋವಿಂದಪ್ಪ ಇದ್ದರು.

## ಸರ್ಕಾರ ನೀರು ಬಿಡುವುದಿಲ್ಲ ಎಂದು ಗಟ್ಟಿಯಾಗಿ ನಿಂತರೆ ನಾವು ಜೊತೆ ನಿಲ್ಲುತ್ತೇವೆ: ಬೊಮ್ಮಾಯಿ

» ಬೆಂಗಳೂರು

ರಾಜ್ಯ ಸರ್ಕಾರ ತಮಿಳುನಾಡಿಗೆ ಯಾವುದೇ ಕಾರಣಕ್ಕೂ ಕಾವೇರಿ ನೀರು ಬಿಡುವುದಿಲ್ಲ ಎಂದು ಗಟ್ಟಿಯಾಗಿ ನಿಂತರೆ ನಾವೂ ಸರ್ಕಾರದ ಜೊತೆಗೆ ನಿಲ್ಲುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.ಸಿಡಬ್ಲುಆರ್ ಸಿ ಪ್ರತಿ ದಿನ 5000 ಕ್ಯೂಸೆಕ್ಸ್ ನಂತೆ ತಮಿಳುನಾಡಿಗೆ ಮತ್ತೆ 15 ದಿನ ಕಾವೇರಿ ನೀರು ಹರಿಸುವಂತೆ ರಾಜ್ಯ ಸರ್ಕಾರಕ್ಕೆ ಆದೇಶ ಮಾಡಿರುವ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ವಸ್ತು ಸ್ಥಿತಿ ನೋಡಿದರೆ, ಕಾವೇರಿಯಲ್ಲಿ ಕುಡಿಯಲಿಕ್ಕೂ ನೀರಿಲ್ಲ. ಮತ್ತೆ 7 ಟಿಎಂಸಿ ನೀರು ಬಿಡಲು ಹೇಳಿದ್ದಾರೆ. ಮಂಡ್ಯ ಜಿಲ್ಲೆ ಒಂದಕ್ಕೆ 32 ಟಿಎಂಸಿ ನೀರು ಬೇಕು ಎಂದರು.

**ಪ್ರಮುಖ ಸುದ್ದಿ**

# ವಿಜ್ಞಾನ ಕ್ಷೇತ್ರದಲ್ಲಿ ನಾವು ಮಾಡಿರುವ ಸಾಧನೆ ಸ್ಫೂರ್ತಿದಾಯಕ

» ಚಳ್ಳಕೆರೆ

ಯಾವುದೇ ಒಂದು ದೇಶ ಅಭಿವೃದ್ದಿಯತ್ತ ದಾಪುಗಾಲು ಇಡಬೇಕಾದರೆ ಅಲ್ಲಿ ವಿಜ್ಞಾನದ ಜ್ಞಾನ ಅಪಾರವಾಗಿರಬೇಕು. ಇತ್ತೀಚಿನ ವರ್ಷಗಳಲ್ಲಿ ನಮ್ಮ ದೇಶ ಬೇರೆ ದೇಶಗಳೊಂದಿಗೆ ಪೈಪೋಟಿ ನಡೆಸಿ ವಿಜ್ಞಾನದಲ್ಲಿ ತನ್ನದೇಯಾದ ಸಾಧನೆಯ ಮೂಲಕ ವಿಶ್ವದ ಗಮನ ಸೆಳೆದಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಕುವೆಂಪು ಆಂಗ್ಲ ಮಾಧ್ಯಮ ಶಾಲೆಯಲ್ಲಿ ತಾಲ್ಲೂಕು ಮಟ್ಟದ ಪ್ರೌಢಶಾಲೆಗಳ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕಿನ ಹಲವಾರು ಪ್ರೌಢಶಾಲೆಗಳ ವಿದ್ಯಾರ್ಥಿಗಳು ತಮ್ಮದೇಯಾದ ಬುದ್ದಿ ಶಕ್ತಿಯ ಮೂಲಕ ಕೆಲವೊಂದು ಬದಲಾವಣೆಗಳೊಂದಿಗೆ ತಮ್ಮ ಮಾದರಿಯನ್ನು ಸಿದ್ದಪಡಿಸಿ ಪ್ರದರ್ಶಿಸಿದ್ದಾರೆ. ಬಹುತೇಕ ಮಾದರಿಗಳು ಎಲ್ಲರ ಗಮನ ಸೆಳೆಯುತ್ತಿವೆ. ಪ್ರೌಢಶಾಲಾ ಹಂತದಲ್ಲೇ ಎಲ್ಲಾ ವಿದ್ಯಾರ್ಥಿಗಳು ವಿಜ್ಞಾನದ ವಿಚಾರದಲ್ಲಿ ಹೆಚ್ಚು ಜಾಗೃತರಾಗಬೇಕು. ನೀವು ಕಲಿತ ವಿಜ್ಞಾನ ಮುಂದಿನ ದಿನಗಳಲ್ಲಿ ನಿಮ್ಮನ್ನು ಸಮಾಜಕ್ಕೆ ಕೊಡುಗೆ ಕೊಡುವಂತಹ ವಿಜ್ಞಾನಿಗಳಾಗಿ ಪರಿವರ್ತಿಸಬಹುದಾಗಿದೆ ಎಂದರು.



ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಇಂದಿನ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ತಾಲ್ಲೂಕಿನ ವಿವಿಧ ಪ್ರೌಢಶಾಲೆಗಳ ವಿಜ್ಞಾನ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದಾರೆ. ವಿಜ್ಞಾನ ಶಿಕ್ಷಕರು ಹಾಗೂ ಇತರೆ ಮಾರ್ಗದರ್ಶನದಿಂದ ಪೈಪೋಟಿ ನೀಡಬಹುದಾದಂತಹ ವೈಜ್ಞಾನಿಕವಾಗಿ ಅಭಿವೃದ್ದಿಯತ್ತ ಸಾಗಬೇಕಾದ ಮಾದರಿಗಳನ್ನು ಸಿದ್ದಪಡಿಸಿದ್ದಾರೆ. ಅತಿಕಡಿಮೆ ಅವಧಿಯಲ್ಲೇ ಅವರು ವಿಜ್ಞಾನದ ವಿಚಾರದಲ್ಲಿ ತಮಗಿರುವ ಕೌಶಲ್ಯತೆಯನ್ನು ಪ್ರದರ್ಶಿಸಿದ್ದಾರೆ. ಇಂದಿನ ಅವರ ಕಲಿಕೆ ಮುಂದಿನ ದಿನಗಳಲ್ಲಿ ಉತ್ತಮ ಭವಿಷ್ಯವನ್ನು ಒದಗಿಸಿಕೊಡುವುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುವೆಂಪು ವಿದ್ಯಾಸಂಸ್ಥೆಯ ಮಾಜಿ ಅಧ್ಯಕ್ಷ, ನಿವೃತ್ತ ಪ್ರಾಂಶುಪಾಲ ಸಿ.ಶಿವಲಿಂಗಪ್ಪ, ವಿಜ್ಞಾನದಲ್ಲಿ ನಾವು ಹೆಚ್ಚು ಮುನ್ನಡೆ ಸಾಧಿಸಿದರೆ ಅದು ದೇಶವನ್ನು ಪ್ರಗತಿಯತ್ತ ಸುಲಭವಾಗಿ ಕೊಂಡೊಯ್ಯುತ್ತದೆ. ಪ್ರಸ್ತುತ ಇಂದಿನ ವಿಜ್ಞಾನದ ಮಾದರಿ ನಮ್ಮ ದೇಶಕ್ಕೆ ವಿಶೇಷ ಹೆಮ್ಮೆ ತಂದಿದೆ. ವಿಜ್ಞಾನಿಗಳು ನೀಡುವ ಕೊಡುಗೆ ಅಪಾರವಾದದ್ದು. ಇಂದಿನ ವಸ್ತು ಪ್ರದರ್ಶನದಲ್ಲೂ ಸಹ ವೈಜ್ಞಾನಿಕವಾಗಿ ಮುನ್ನಡೆ ಸಾಧಿಸಲು ಅವಶ್ಯವಿರುವ ಕೆಲವು ಮಾದರಿಗಳು ಸಿದ್ದಪಡಿಸಿರುವುದು ಸಂತಸ ತಂದಿದೆ ಎಂದರು. ಕಾರ್ಯಕ್ರಮದಲ್ಲಿ ಪೌರಾಯುಕ್ತ ಸಿ.ಚಂದ್ರಪ್ಪ, ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯ ಸಂಘದ ಅಧ್ಯಕ್ಷ ಡಿ.ಶ್ರೀನಿವಾಸ್, ಪ್ರೌಢಶಾಲೆ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ರಾಜಕುಮಾರ್, ಕಾರ್ಯದರ್ಶಿ ಪಾಲಯ್ಯ, ಶಿವಕುಮಾರ್, ಶಶಿಧರ, ಮಾರುತಿಭಂಡಾರಿ, ನಗರಸಭಾ ಸದಸ್ಯ ಎಂ.ಜೆ.ರಾಘವೇಂದ್ರ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T